ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್   Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 02 RNI Number : KNKAN/25/A2770 02-01-2026 Friday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :02 ರಾಯಚೂರು 02-01-2026 ಶುಕ್ರವಾರ ಪುಟ 04 ಬೆಲೆ ರೂ.2/- ಮೊ:8660146563

ಕೋಗಿಲು ಪ್ರಕರಣದಲ್ಲಿ ಮನೆ ಕೊಟ್ಟರೆ ನ್ಯಾಯಾಲಯದಲ್ಲಿ ಪ್ರಶ್ನೆ, ರಾಜ್ಯಪಾಲರಿಗೆ ದೂರು

ಬೆಂಗಳೂರು: ಕೋಗಿಲು ಅಕ್ರಮ ಗುಡಿಸಲು-ಮನೆ ತೆರವು ಪ್ರಕರಣದಲ್ಲಿ ಹೊರದೇಶದವರಿಗೆ ಮನೆ ನೀಡಿದರೆ ಅದನ್ನು ನ್ಯಾಯಾಲಯದಲ್ಲಿ ಪ್ರಶ್ನಿಸುತ್ತೇನೆ. ಇದರ ವಿರುದ್ಧ ರಾಜ್ಯಪಾಲರಿಗೆ ಮನವಿ ನೀಡುತ್ತೇವೆ ಎಂದು ಶಾಸಕ ಎಸ್.ಆರ್. ವಿಶ್ವನಾಥ್ ಎಚ್ಚರಿಸಿದ್ದಾರೆ.

ಬೆಂಗಳೂರಿನ ಯಲಹಂಕದ ಕೋಗಿಲು ಲೇಔಟ್ ಬಳಿಯಿರುವ ಫಕೀರ್ ಕಾಲೋನಿ ಮತ್ತು ನಸೀಮ್ ಬಡಾವಣೆಯಲ್ಲಿ ಮನೆ-ಗುಡಿಸಲುಗಳ ನೆಲಸಮ ಕುರಿತು ಸತ್ಯಾಸತ್ಯತೆಯನ್ನು ತಿಳಿಯಲು ರಾಜ್ಯ ಬಿಜೆಪಿ ವತಿಯಿಂದ ಸತ್ಯಶೋಧನಾ ತಂಡವನ್ನು ರಚಿಸಿದ್ದು, ಆ ತಂಡ ಇಂದು ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಸಭೆ ನಡೆಸಿತು.

ಬಳಿಕ ಮಾಧ್ಯಮಗಳ ಜೊತೆ ಮಾತನಾಡಿದ ಶಾಸಕ ಎಸ್.ಆರ್. ವಿಶ್ವನಾಥ್, ಬಿಬಿಎಂಪಿಗೆ ಸೇರಿದ ಜಾಗದಲ್ಲಿ ಅಕ್ರಮವಾಗಿ ಗುಡಿಸಲು ಕಟ್ಟಿಕೊಂಡಿದ್ದಾರೆ. ಇವತ್ತು ನಿಜವಾದ ಫಲಾನುಭವಿ 10.5 ಲಕ್ಷ ರೂಪಾಯಿ ದುಡ್ಡು ಕಟ್ಟಬೇಕಾಗುತ್ತದೆ. ಬ್ಯಾಂಕ್ ಸಾಲ; ಇಲ್ಲವೇ ಸ್ವಂತ ಪ್ರಯತ್ನದಿಂದ ಇದನ್ನು ಕಟ್ಟಬೇಕು. ಇವನಿಗೆ ಬಿಬಿಎಂಪಿಯಿಂದ 5 ಲಕ್ಷ ರೂಪಾಯಿ, ಅಲ್ಪಸಂಖ್ಯಾತ ಇಲಾಖೆಯಿಂದ ಎರಡೂವರೆ ಲಕ್ಷ ರೂಪಾಯಿ. ಇವೆಲ್ಲವನ್ನು ಕೊಟ್ಟು ಕೇವಲ ಎರಡೂವರೆ ಲಕ್ಷದಲ್ಲಿ ಮನೆ ಕೊಡುತ್ತೇವೆ ಅಂದರೆ ಈಗ ಏನು ಒಂದು ಲಕ್ಷ ಮನೆಗಳನ್ನು ಕಟ್ಟುತ್ತಿದ್ದಾರೆ. ಬೆಂಗಳೂರು ಸುತ್ತು ಮುತ್ತಲು 45 ಸಾವಿರ ಮನೆಗಳು ಆಗುತ್ತಿವೆ. ಅವರು ಯಾರೂ ಕೂಡ ದುಡ್ಡು ಕಟ್ಟಲ್ಲ. ಅವರೆಲ್ಲ 2.5 ಲಕ್ಷಕ್ಕೇ ಸ್ಟಿಕ್ ಆನ್ ಆಗುತ್ತಾರೆ. ಇದು ಸರ್ಕಾರಕ್ಕೆ ದೊಡ್ಡ



ಮುಜುಗರ ಆಗಲಿದೆ. ದೊಡ್ಡ ಹೊಡೆತ ಕೊಡಲಿದೆ. ಇದಕ್ಕೂ ಮೀರಿ ಏನಾದ್ರೂ ಮನೆಗಳನ್ನು ಕೊಟ್ಟರೆ ನ್ಯಾಯಾಲಯಕ್ಕೆ ಹೋಗುತ್ತೇವೆ. ಈಗಾಗಲೇ ದಾಖಲೆಗಳನ್ನು ಕೂಡ ಸಂಗ್ರಹ ಮಾಡುತ್ತಿದ್ದಾರೆ ಎಂದರು.

ನ್ಯಾಯಾಲಯಕ್ಕೆ ಹೋಗಿ ಪ್ರಶ್ನೆ ಮಾಡುವುದಲ್ಲದೇ ಮಾನ್ಯ ರಾಜ್ಯಪಾಲರಿಗೆ ಇದರ ಬಗ್ಗೆ ಮನವಿ ಕೊಡುತ್ತೇವೆ ಎಂದರು. ನಾಳೇನೆ ಮನೆಗಳ ಹಂಚಿಕೆ ಮಾಡಲಿಕ್ಕೆ ಪ್ಲಾನ್ ಮಾಡ್ಕೊಂಡಿದ್ದೀರಾ?. ಅದು ಸಾಧ್ಯ ಇಲ್ಲ. ಸುಮ್ಮನೆ ಅವರು ಹೇಳಿರಬಹುದು. ಅವರು ಇಲ್ಲಿ ಐದು ವರ್ಷ ವಾಸ ಇದ್ದಾರೆ ಅನ್ನೋದಕ್ಕೆ ದಾಖಲೆಗಳನ್ನು ಕೊಡಬೇಕು. 18 ದಾಖಲೆಗಳನ್ನು ಕೇಳಿದ್ದಾರೆ ಅವನ್ನು ಕೊಡಬೇಕು. ಯಾವ ವಿಶೇಷ ಪ್ರಕರಣ? ಹಾಗೆಲ್ಲ ಮಾಡಲು ಆಗೋದಿಲ್ಲ ಎಂದು ಹೇಳಿದರು.

ಪಾಕಿಸ್ತಾನ, ಬಾಂಗ್ಲಾದಿಂದ ಬಂದಿರುವ ಹಿಂದೂ, ಕ್ರಿಶ್ಚಿಯನ್, ಸಿಖ್ಖರು ಸೇರಿ ಅನೇಕ ಅಲ್ಪಸಂಖ್ಯಾತರು ಬೀದಿ ಬೀದಿಗಳಲ್ಲಿ ಅಲೆಯುತ್ತಿದ್ದಾರೆ. ಅವರಿಗೆ ಕೂಡ ಯಾವ ಸರ್ಕಾರಗಳು ಇಲ್ಲಿವರೆಗೂ ಮನೆ ಕೊಟ್ಟಿಲ್ಲ. ಅವರಿಗೆ ಪೌರತ್ವ ಕೊಡಬೇಕು ಅಂತ ಅಂದರೆ ಇದೇ ಕಾಂಗ್ರೆಸ್ ಅವರು, ಇದೇ ಕಮ್ಯುನಿಸ್ಟ್ ಪಕ್ಷದವರು ದೊಡ್ಡ ಹೋರಾಟ ಮಾಡುತ್ತಾರೆ. ಆದರೆ ಇವತ್ತು ಬೇರೆ ದೇಶದಿಂದ ಬಂದವರಿಗೆ ತುರ್ತು ಏನಿದೆ ಎಂದು ಕೇಳಿದರು.

ಇದು ಅಲ್ಪಸಂಖ್ಯಾತರ ವೋಟಿನ ತುಷ್ಟೀಕರಣದ ಮುಂದುವರೆದ ಭಾಗ. ಈಗೇನು ಕೇರಳ ಎಲೆಕ್ಷನ್ ನಡೀತಾ ಇದೆ. ಕಾಂಗ್ರೆಸ್ ಮತ್ತು ಕಮ್ಯುನಿಸ್ಟ್ ಸರ್ಕಾರಗಳಿಗೆ ಅಲ್ಪಸಂಖ್ಯಾತರ ವೋಟ್ ತೆಗೊದುಕೊಳ್ಳಲು ಇಲ್ಲಿ ನಮ್ಮ ಕರ್ನಾಟಕವನ್ನು ಬಲಿ ಕೊಡುವ ಕೆಲಸ ಮಾಡಿದ್ದಾರೆ. ಇದರ ವಿರುದ್ಧ ನಾವು ನ್ಯಾಯಾಲಯದಲ್ಲೂ ಹೋರಾಟ ಮಾಡುತ್ತೇವೆ. ರಾಜ್ಯಪಾಲರ ಬಳಿ ಹೋಗುತ್ತೇವೆ. ಸ್ಥಳೀಯವಾಗಿ ಕೂಡ ಏನು ಹೋರಾಟ ಮಾಡಬೇಕೋ ಮಾಡುತ್ತೇವೆ ಎಂದು ತಿಳಿಸಿದರು.

ಗ್ರಾಮ ಪಕ್ಕದಲ್ಲಿ ಬಿಬಿಎಂಪಿಗೆ ಸೇರಿದ ಜಾಗದಲ್ಲಿ ಕಳೆದ ಎರಡು ವರ್ಷಗಳಿಂದ ಹಂತಹಂತವಾಗಿ ಅಕ್ರಮವಾಗಿ ಮನೆ- ಗುಡಿಸಲು ಕಟ್ಟಿಕೊಂಡಿದ್ದಾರೆ. ಬೇರೆ ದೇಶದಿಂದ ಬಂದ ವಲಸಿಗರು ಮತ್ತು ಸ್ಥಳೀಯರಿಂದ ಕಾಂಗ್ರೆಸ್ಸಿನ ಸ್ಥಳೀಯ ಅಲ್ಪಸಂಖ್ಯಾತರ ಮುಖಂಡರು ನಾವು ಮನೆ ಕೊಡಿಸ್ತೀವಿ ಅಂತ ಹೇಳಿ ದುಡ್ಡನ್ನು ವಸೂಲಿ ಮಾಡಿದ್ದಾರೆ. ಅವರು ಅಲ್ಲಿ ಮನೆಗಳನ್ನು ಕಟ್ಟಿಸಿ ಅದನ್ನು ಬಾಡಿಗೆಗೆ ಕೊಟ್ಟು ಪ್ರತಿ ತಿಂಗಳು ಬಾಡಿಗೆ ವಸೂಲಿ ಮಾಡಿದ್ದಾನೆ. ಅವರು ಯಾರು ಕೂಡನು ಅಲ್ಲಿ ಸ್ವಂತ ಸೂರಿಗೋಸ್ಕರ ಕೊಟ್ಟಿದ್ದಲ್ಲ. ಬೇರೆಯವರು ಮನೆ ಕಟ್ಟಿ ಬಾಡಿಗೆ ಕೊಟ್ಟು ದುಡ್ಡು ವಸೂಲಿ ಮಾಡ್ತಾ ಇದ್ರು ಎಂದರು.

ಸರ್ಕಾರ- ಅಧಿಕಾರಿಗಳು ನೋಟಿಸ್ ಕೊಟ್ಟು ನಿಯಮಾನುಸಾರ ಕಾನೂನು ಬದ್ಧವಾಗಿ ಮನೆಗಳನ್ನು ತೆರವು ಮಾಡಿಸಿದ್ದಾರೆ. ತೆರವು ಮಾಡಿಸಿ ಎರಡು ದಿನ ಏನೂ ಆಗಿರಲಿಲ್ಲ. ಆದರೆ ಕೇರಳದ ಮುಖ್ಯಮಂತ್ರಿಗಳು ಒಂದು ಹೇಳಿಕೆಯನ್ನು ಕೊಟ್ಟರು ಅಂದ ತಕ್ಷಣನೇ ಅಲ್ಲಿನ ಕಾಂಗ್ರೆಸ್ಸಿನ ವರಿಷ್ಠ ವೇಣುಗೋಪಾಲ್ ಹೇಳಿಕೆ ಕೊಟ್ಟರು. ತಕ್ಷಣ ಇಲ್ಲಿನ ಕಾಂಗ್ರೆಸ್ ಸರ್ಕಾರ, ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು ಎಲ್ಲಾ ಅಲ್ಪಸಂಖ್ಯಾತ ಸಚಿವರು ಪ್ರತಿಯೊಬ್ಬರು ಕೂಡ ಸ್ಥಳ ಪರಿಶೀಲನೆಯನ್ನು ಮಾಡಿ, ಅನ್ಯಾಯ ಆಗಿಬಿಟ್ಟಿದೆ. ಅವರಿಗೆಲ್ಲ ಮನೆಗಳನ್ನು ಕೊಡುವುದಾಗಿ ಹೇಳಿದ್ದಾರೆ ಎಂದು ವಿವರಿಸಿದರು.

ಮುಖ್ಯಮಂತ್ರಿಗಳು ತುರ್ತು ಸಭೆ ಮಾಡಿದ್ದಾರೆ. ಪ್ರವಾಹ ಬಂದಾಗ ಆಗಲಿಲ್ಲ. ಭೂಕಂಪ ಬಂದಾಗ ಆಗಲಿಲ್ಲ. ಐಪಿಎಲ್ ತುಳಿತಕ್ಕೆ ಒಳಗಾದಾಗ ಕೂಡ ಇಷ್ಟು ತುರ್ತು ಸಭೆಯನ್ನು ಮಾಡಿ ಪರಿಹಾರವನ್ನು ಘೋಷಣೆ ಮಾಡಿರಲಿಲ್ಲ. ಅವರಿಗೆಲ್ಲ ಈಗಾಗಲೇ ದಾಖಲೆಗಳನ್ನು ಸಂಗ್ರಹ ಮಾಡಿ ಬೈಯಪ್ಪನಹಳ್ಳಿಯಲ್ಲಿ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರ ಸಬ್ಸಿಡಿಯಲ್ಲಿ

3ನೇ ಪುಟಕ್ಕೆ

ಡಿಸಿಆರ್‌ಇ ವಿಶೇಷ ಪೊಲೀಸ್ ಠಾಣೆಗಳಲ್ಲಿ ಸಿಬ್ಬಂದಿ ಕೊರತೆ: ಆಕ್ರೋಶ



ರಾಯಚೂರು,ಜ.01-

ರಾಜ್ಯದಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರ ಮೇಲೆ ನಡೆಯುವ ದೌರ್ಜನ್ಯ ಪ್ರಕರಣಗಳ ತನಿಖೆಗೆ ಸ್ಥಾಪಿಸಲಾದ ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯ (ಡಿಸಿಆರ್‌ಇ) ವಿಶೇಷ ಪೊಲೀಸ್ ಠಾಣೆಗಳಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಕೊರತೆಯಿಂದ ಪರಿಣಾಮಕಾರಿ ತನಿಖೆ ನಡೆಯುತ್ತಿಲ್ಲ ಎಂದು ದಲಿತ ಸಂಘಟನೆಗಳು ಆರೋಪಿಸಿವೆ.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಹಾಗೂ ಎಸ್.ಸಿ ಎಸ್.ಟಿ ದೌರ್ಜನ್ಯ ನಿಯಂತ್ರಣ ಸಮಿತಿ ಸದಸ್ಯರಾದ ಎಸ್. ನರಸಿಂಹಲು, 14 ಏಪ್ರಿಲ್ 2024 ರಂದು ರಾಜ್ಯಾದ್ಯಂತ ಜಿಲ್ಲೆಗೊಂದರಂತೆ 33 ಡಿಸಿಆರ್‌ಇ ಪೊಲೀಸ್ ಠಾಣೆಗಳನ್ನು ಸರ್ಕಾರ ಸ್ಥಾಪಿಸಿದ್ದರೂ, ಪ್ರಸ್ತುತ ಕೇವಲ 12 ಠಾಣೆಗಳಲ್ಲಿ ಮಾತ್ರ ಡಿವೈಎಸ್ಪಿಗಳು ಕಾರ್ಯನಿರ್ವಹಿಸುತ್ತಿದ್ದಾರೆ ಎಂದರು.

ಡಿವೈಎಸ್ಪಿ ಮಟ್ಟದ ಅಧಿಕಾರಿಗಳಿಂದ ನಡೆಯಬೇಕಾದ ದೌರ್ಜನ್ಯ ಪ್ರಕರಣಗಳ ತನಿಖೆಗಳನ್ನು ಪಿಎಸ್‌ಐ ಮತ್ತು ಪಿಐಗಳ ಮೂಲಕ ನಡೆಸಲಾಗುತ್ತಿರುವುದರಿಂದ ನ್ಯಾಯಸಮ್ಮತ ಮತ್ತು ಸಮಯಬದ್ಧ ತನಿಖೆ ಸಾಧ್ಯವಾಗುತ್ತಿಲ್ಲ. ಇದರಿಂದ ಆರೋಪಿಗಳ ಬಂಧನ, ಅಂತಿಮ ವರದಿ ಸಲ್ಲಿಕೆ ಸೇರಿದಂತೆ ಕಾನೂನು ಪ್ರಕ್ರಿಯೆಗಳು ವಿಳಂಬವಾಗುತ್ತಿವೆ ಎಂದು ಅವರು ಆರೋಪಿಸಿದರು.

ಇದಕ್ಕು ಜೊತೆಗೆ ಡಿಸಿಆರ್‌ಇ ಠಾಣೆಗಳಿಗೆ ಸ್ವಂತ ಕಟ್ಟಡ, ಅಗತ್ಯ ಪೀಠೋಪಕರಣಗಳು ಹಾಗೂ ಮೂಲಭೂತ ಸೌಲಭ್ಯಗಳ ಕೊರತೆ ಇರುವುದರಿಂದ ಈ ವಿಶೇಷ ಠಾಣೆಗಳ ಸ್ಥಾಪನೆಯ ಉದ್ದೇಶವೇ ಸಂಪೂರ್ಣವಾಗಿ ಈಡೇರಿಲ್ಲ ಎಂದು ತಿಳಿಸಿದರು.

ಆದ್ದರಿಂದ ತಕ್ಷಣವೇ ಎಲ್ಲಾ ಡಿಸಿಆರ್‌ಇ ಪೊಲೀಸ್ ಠಾಣೆಗಳಿಗೆ ಡಿವೈಎಸ್ಪಿ ಸೇರಿದಂತೆ ಅಗತ್ಯ ಸಿಬ್ಬಂದಿಯನ್ನು ನೇಮಕ ಮಾಡಬೇಕು, ಸ್ವಂತ ಕಟ್ಟಡ ಹಾಗೂ ಮೂಲಸೌಕರ್ಯಗಳನ್ನು ಒದಗಿಸಿ 24 ಗಂಟೆ ಕಾರ್ಯನಿರ್ವಹಿಸುವಂತೆ ಕ್ರಮ ಕೈಗೊಳ್ಳಬೇಕು ಎಂದು ಸರ್ಕಾರವನ್ನು ಆಗ್ರಹಿಸಿದರು. ಇದಕ್ಕೆ ಸರ್ಕಾರ ಸ್ಪಂದಿಸದಿದ್ದಲ್ಲಿ ರಾಜ್ಯಾದ್ಯಂತ ವಿವಿಧ ದಲಿತ ಸಂಘಟನೆಗಳ ನೇತೃತ್ವದಲ್ಲಿ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಶ್ರೀನಿವಾಸ್ ರಾಜು, ಎಂ.ಎನ್. ಭೇರಿ, ಹನುಮೇಶ ಆರೋಲಿ, ನಾಗೇಂದ್ರ, ಶಿವಕುಮಾರ ಮ್ಯಾಗಲಮನಿ ಸೇರಿದಂತೆ ದಲಿತ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು.

ದಿ.3ರಂದು ವಿದ್ಯಾರ್ಥಿಗಳ ನಡೆ - ಸಂವಿಧಾನದ ಕಡೆ



ರಾಯಚೂರು,ಜ.01-

12ನೇ ವಾರ್ಷಿಕೋತ್ಸವದ ಅಂಗವಾಗಿ ವಿದ್ಯಾರ್ಥಿಗಳ ನಡೆ - ಸಂವಿಧಾನದ ಕಡೆ', ಮಾತೆ ಸಾವಿತ್ರಿ ಬಾಯಿ ಫುಲೆ ಜಯಂತ್ಯೋತ್ಸವ ಹಾಗೂ ರಾಜ್ಯಮಟ್ಟದ ಪ್ರಶಸ್ತಿ ಪ್ರದಾನ ಸಮಾರಂಭವನ್ನು ದಿ.3ರಂದು (ಶನಿವಾರ) ಗಬ್ಬೂರು ಅವರಣದ ಸರಕಾರಿ ಪ್ರೌಢಶಾಲೆ ಆವರಣದಲ್ಲಿ ಆಯೋಜಿಸಲಾಗಿದೆ ಎಂದು ಸಮತಾ ಗ್ರಾಮೀಣಾಭಿವೃದ್ಧಿ ಹಾಗೂ ಶಿಕ್ಷಣ ಸಂಸ್ಥೆ (ರಿ), ಗಬ್ಬೂರು ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಬಸವರಾಜ್ ಬ್ಯಾಗವಟ್ ತಿಳಿಸಿದ್ದಾರೆ.

ನಗರದಲ್ಲಿ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾ ಡಿದ ಅವರು, ಗಬ್ಬೂರಿನ ಸರಕಾರಿ ಪ್ರೌಢಶಾಲೆ, ಸರಕಾರಿ ಮೌಲಾನಾ ಆಜಾದ್ ಮಾದರಿ ಶಾಲೆ, ವಿದ್ಯಾ ಜ್ಯೋತಿ ಪ್ರೌಢಶಾಲೆ, ನಾಗಯ್ಯ ತಾತ ಸ್ಮಾರಕ ಪ್ರೌಢಶಾಲೆ, ಸರಕಾರಿ ಪಿಯು ಕಾಲೇಜು ಹಾಗೂ ನವಯುಗ ಪಿಯು ಮತ್ತು ಪದವಿ ಕಾಲೇಜುಗಳ ವಿದ್ಯಾರ್ಥಿಗಳಿಗಾಗಿ ಈ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಬೂದಿಬಸವೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು, ಬೂದಿಬಸವೇಶ್ವರ ಸಂಸ್ಥಾನ ಮಠ, ಗಬ್ಬೂರು ವಹಿಸಲಿದ್ದಾರೆ. ಉದ್ಘಾಟನೆಯನ್ನು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಹಾಗೂ ಸಣ್ಣ ನೀರಾವರಿ ಸಚಿವರಾದ ಎನ್.ಎಸ್. ಭೋಸರಾಜು ನೆರವೇರಿಸಲಿದ್ದಾರೆ. ದೇವದುರ್ಗ ಶಾಸಕರಾದ ಕರೆಮ್ಮ ಜಿ. ನಾಯಕ ಅವರು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ವಿಶೇಷ ಉಪನ್ಯಾಸವನ್ನು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಮಾಜಿ ಅಧ್ಯಕ್ಷರಾದ ಹಿರಿಯ ವಕೀಲ ಡಾ. ಸಿ.ಎಸ್. ದ್ವಾರಕನಾಥ್ ನೀಡಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಹುಮನಾಬಾದ್ ವಿಧಾನಪರಿಷತ್ ಸದಸ್ಯ ಚಂದ್ರಶೇಖರ ಪಾಟೀಲ್ ಹಾಗೂ ದೇವದುರ್ಗ ಟಿಎಪಿಸಿಎಂಎಸ್ ಅಧ್ಯಕ್ಷ ಶರಣಗೌಡ ಪಿ. ಮಾಲಿ ಪಾಟೀಲ್ ಪಾಲ್ಗೊಳ್ಳಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗಬ್ಬೂರು ಗ್ರಾಮ ಪಂಚಾಯತ್ ಅಧ್ಯಕ್ಷರಾದ ಪಾರ್ವತಿ ಬುಸ್ಸಪ್ಪ ವಹಿಸಲಿದ್ದಾರೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ

3ನೇ ಪುಟಕ್ಕೆ

ರಾಷ್ಟ್ರೀಯ ಮಹಿಳಾ ಕಾಂಗ್ರೆಸ್ ಸಮಿತಿಯ ಕಾರ್ಯದರ್ಶಿಯಾಗಿ ಶ್ರೀದೇವಿ ಆರ್‌ನಾಯಕ

ಅರಕೇರಾ,ಜ.01-

ರಾಷ್ಟ್ರೀಯ ಮಹಿಳಾ ಕಾಂಗ್ರೆಸ್ ಸಮಿತಿಗೆ ಶ್ರೀದೇವಿ ಆರ್ ನಾಯಕ ಅವರನ್ನು ಕಾರ್ಯದರ್ಶಿಗಳನ್ನಾಗಿ ನೇಮಿಸಿ ಆದೇಶಿಸಲಾಗಿದೆ.



ಎಐಸಿಸಿ ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ್ ಅವರು ಪ್ರಕಟಿಸಿದ ಪಟ್ಟಿಯಲ್ಲಿ ಕರ್ನಾಟಕದಿಂದ ಇಬ್ಬರು ಮಾತ್ರ ಕಾರ್ಯದರ್ಶಿ ಆಯ್ಕೆಗೊಂಡಿದ್ದು, ಇವರಲ್ಲಿ ಶ್ರೀದೇವಿ ಆರ್. ನಾಯಕ ಒಬ್ಬರಾಗಿದ್ದಾರೆ.

ಮಹಿಳಾ ಕಾಂಗ್ರೆಸ್ ಸದಸ್ಯತ್ವ ನೋಂದಣಿಯಲ್ಲಿ ಶ್ರೀದೇವಿ ಆರ್ ವ ನಾಯಕ ಅವರು ಉತ್ತರ ಕರ್ನಾಟಕದಲ್ಲಯೇ ಅತಿ ಹೆಚ್ಚು ಸದಸ್ಯತ್ವ ನೋಂದಣಿ ಮಾಡಿದ್ದರು.

ಅತಿ ಹೆಚ್ಚು ಸದಸ್ಯತ್ವ ನೋಂದಣಿ ಮಾಡಿದ ಶ್ರೀದೇವಿ ಆರ್ ನಾಯಕ ಅವರನ್ನು ದೆಹಲಿಯಲ್ಲಿ ಮಹಿಳಾ ಕಾಂಗ್ರೆಸ್ ವತಿಯಿಂದ ಸನ್ಮಾನಿಸಲಾಗಿತ್ತು.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ದೇವದುರ್ಗ ಕ್ಷೇತ್ರದಿಂದ ಇವರು

3ನೇ ಪುಟಕ್ಕೆ

ವರ್ಣಾಶ್ರಮ ವ್ಯವಸ್ಥೆಯ ಪೋಷಣೆಗೆ ಕರೆ ನೀಡಿದ ಕನೇರಿಮಠದ ಸ್ವಾಮಿ ವಿರುದ್ಧ ಪ್ರಕರಣ ದಾಖಲಿಸಿ : ಆರ್.ಮಾನಸಯ್ಯ

ಲಿಂಗಸುಗೂರು,ಜ.01-

ವರ್ಣಾಶ್ರಮ ವ್ಯವಸ್ಥೆಯ ಪೋಷಣೆಗೆ ಕರೆ ನೀಡಿರುವ ಕನೇರಿಮಠದ ಸ್ವಾಮಿಯ ವಿರುದ್ಧ ಪ್ರಕರಣ ದಾಖಲಿಸಬೇಕು ಎಂದು ಹಿರಿಯ ಹೋರಾಟಗಾರ ಆರ್. ಮಾನಸಯ್ಯ ಆಗ್ರಹಿಸಿದರು.



ಪಟ್ಟಣದ ಭೀಮಾ ಕೋರೆಗಾಂವ್ ವಿಜಯೋತ್ಸವ ಆಚರಣೆ ಸಮಿತಿ ಹಮ್ಮಿಕೊಂಡಿದ್ದ ಜೈ ಭೀಮ್ ರೆಜಿಮೆಂಟ್ ಪಥ ಸಂಚಲನ ಹಾಗೂ ಬಹಿರಂಗ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ''ಕಲ್ಯಾಣದ ಶರಣರು ಯಾವುದೇ ಒಂದು ಧರ್ಮಕ್ಕೆ ಸೀಮಿತರಾಗದೆ ಸಹೋದರತೆಯನ್ನು ಸಾರುತ್ತ ಜಾತಿ ನಾಶಕ್ಕೆ ಕರೆ ನೀಡಿದ್ದರು. ಅವರು ವರ್ಣಾಶ್ರಮ ವ್ಯವಸ್ಥೆಯನ್ನು ಧಿಕ್ಕರಿಸಿದ್ದರು. ಅಂಥಹ ಮಹಾನ್ ಶರಣರನ್ನು ಹಿಂದೂ ಎಂಬ ಒಂದೇ ಚೌಕಟ್ಟಿನಲ್ಲಿ ಬಂಧಿಸಲು ಪ್ರಯತ್ನ ನಡೆಯುತ್ತಿದೆ'' ಎಂದು ಆಕ್ರೋಶ ವ್ಯಕ್ತಪಡಿಸಿದರು.

ಭೀಮ ಕೋರೆಗಾಂವ್ ಯುದ್ಧದ ವಿಜಯೋತ್ಸವವು ದಲಿತರ ಸ್ವಾಭಿಮಾನದ ಗೆಲುವಾಗಿದೆ. ಈ ಯುದ್ಧದಲ್ಲಿ ಮಹರ್ ಪಡೆಯ ಜಯವನ್ನು ಇತಿಹಾಸದಲ್ಲಿ ಉದ್ದೇಶಪೂರ್ವಕವಾಗಿ ಮರೆಮಾಚಲಾಗಿತ್ತು. ನಂತರ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರು ಈ ವಿಜಯದ ಕುರಿತು ಚರಿತ್ರೆಯನ್ನು ದಾಖಲಿಸಿ ಇತಿಹಾಸಕ್ಕೆ ಬೆಳಕು ತಂದರು ಎಂದು ಅವರು ಹೇಳಿದರು.

''ಈ ಯುದ್ಧದ ಗೆಲುವು ದಲಿತ ಸಮುದಾಯಕ್ಕೆ ಸ್ವಾಭಿಮಾನವನ್ನು

3ನೇ ಪುಟಕ್ಕೆ

ನದಿಯ ನೀರು ಕುಡಿಯುವುದಕ್ಕೂ ಯೋಗ್ಯವಾಗಿಲ್ಲ : ಪಾಟೀಲ್



ಮಾನ್ವಿ,ಜ.01-

ರಾಜ್ಯದಲ್ಲಿ ಅತಿ ಹೆಚ್ಚಿನ ವಿಸ್ತೀರ್ಣದಲ್ಲಿ ಹರಿಯುವ ತುಂಗಭದ್ರಾ ನದಿಯ ಉಗಮ ಸ್ಥಾನದಲ್ಲಿ ಅನೇಕ ಯೋಜನೆಗಳ ಒತ್ತಡ ಹಾಗೂ ತುಂಗಭದ್ರಾ ನದಿ ತೀರದಲ್ಲಿನ ಶೃಂಗೇರಿಯಿಂದ ಹರಿಹರದವರೆಗಿನ ಹೆಚ್ಚಿನ ಪುಣ್ಯ ಕ್ಷೇತ್ರಗಳಿರುವುದರಿಂದ ಇಂತಹ ಕ್ಷೇತ್ರಗಳಿಗೆ ಪ್ರತಿನಿತ್ಯ ಲಕ್ಷಾಂತರ ಭಕ್ತರು ಆಗಮಿಸು ವುದರಿಂದ ಉತ್ಪತ್ತಿಯಾಗುವ ತ್ಯಾಜ್ಯವನ್ನು ಸಂಸ್ಕರಿಸಿ ನದಿಗೆ ಬಿಡದೆ ಇರುವುದರಿಂದ ಹಾಗೂ ನದಿ ತೀರದಲ್ಲಿನ ನಗರ, ಪಟ್ಟಣಗಳ ತ್ಯಾಜ್ಯವನ್ನು ಸಂಸ್ಕರಿಸಿ ನದಿಗೆ ಬಿಡದೆ ನೇರವಾಗಿ ಬಿಡುತ್ತಿರುವುದರಿಂದ ನದಿಯ ನೀರು ಇಂದು ಕುಡಿಯುವುದಕ್ಕೂ ಕೂಡಾ ಯೋಗ್ಯವಾಗಿ ಉಳಿದಿಲ್ಲ. ನದಿಯನ್ನು ಭಾವನಾತ್ಮಕವಾಗಿ ನೋಡದೆ ಪರಿಸರತ್ಮಾಕವಾಗಿ ನೋಡಬೇಕು. ನಮ್ಮ ರಾಜ್ಯದಲ್ಲಿ ಉಳಿದಿರುವ ನದಿ,ಕೆರೆ ಹಾಗೂ ನೀರಿನ ಜಲ ಮೂಲಗಳನ್ನು ಸ್ವಚ್ಛವಾಗಿ ಶುದ್ದವಾಗಿ ಉಳಿಸಿಕೊಳ್ಳಬೇಕಾಗಿದೆ. ಅದ್ದರಿಂದ ನಿರ್ಮಲ ತುಂಗಭದ್ರಾ ಅಭಿಯಾನವನ್ನು 4 ಹಂತಗಳಲ್ಲಿ ಮಾಡಲಾ

3ನೇ ಪುಟಕ್ಕೆ

ನರೇಗಾ ಕೂಲಿಕಾರರೊಂದಿಗೆ ಹೊಸ ವರ್ಷ ಸಂಭ್ರಮ



ಸಿರವಾರ ,ಜ.1 ತಾಲೂಕಿನ ಹೀರೆಹಣಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗೊಲ್ಲದಿನ್ನಿ ಗ್ರಾಮದಲ್ಲಿ ನರೇಗಾ ಯೋಜನೆಯಡಿ ನಾಲಾ ಹೊಳೆತ್ತುವ ಕೆಲಸ ಸ್ಥಳದಲ್ಲಿ ಕೂಲಿಕಾರರೊಂದಿಗೆ 2026ರ ಹೊಸ ವರ್ಷಾಚರಣೆ ಸಂಭ್ರಮದಿಂದ ನಡೆಯಿತು. ಕೇಕ್ ಕತ್ತರಿಸಿ ಸಿಹಿ ಹಂಚಿಕೊಂಡು ಎಲ್ಲರಿಗೂ ಶುಭಾಶಯಗಳು ಕೋರಲಾಯಿತು.

ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಶಶೀಧರ್ ಸ್ವಾಮಿ ಮಾತನಾಡಿ, ಕೂಲಿಕಾರರು ನಿಗದಿತ ಕೆಲಸವನ್ನು ಉತ್ತಮವಾಗಿ ಪೂರೈಸಬೇಕು ಎಂದು ಸೂಚಿಸಿದರು. ಈ ವರ್ಷ ಎಲ್ಲರಿಗೂ ಒಳ್ಳೆಯದು ದೊರೆತು ಖುಷಿಯ ಜೀವನ ನಡೆಸಲಿ ಎಂದು ಹಾರೈಕೆ ನೀಡಿದರು.

ನರೇಗಾ ಸಹಾಯಕ ನಿರ್ದೇಶಕ ಮಂಜುನಾಥ್ ಜಾವೂರ್ ಎನ್‌ಎಂಆರ್ ಪಟ್ಟಿಯಲ್ಲಿರುವವರು ಮಾತ್ರ ಕೆಲಸಕ್ಕೆ ಹಾಜರಾಗಬೇಕು. ಪ್ರತಿದಿನ ಎರಡು ಬಾರಿ ಹಾಜರಾತಿ ತೆಗೆದು ಕೆಲಸ ಚೆನ್ನಾಗಿ ಮಾಡುವಂತೆ ತಿಳಿಸಿದರು.ತಾಂತ್ರಿಕ ಸಂಯೋಜಕ ಶಿವು, ತಾಂತ್ರಿಕ ಸಹಾಯಕ ಸಾಗರ, ಐಇಸಿ ರಾಜೇಂದ್ರ, ಬಿಎಫ್ಟಿ ಅಮರೇಶ್, ಜಿಕೆಎಂ ಶಿವಬಸಮ್ಮ, ಮೇಟ್ ಮತ್ತು ಕೂಲಿಕಾರರು ಭಾಗವಹಿಸಿದ್ದರು.

ರಾಯಚೂರು ಜಿಲ್ಲಾ ನದಾಫ್ ಪಿಂಜಾರ ಸಂಘ ಸಭೆ

ಹೊಸ ವರ್ಷ ಕ್ಯಾಲೆಂಡರ್ ಬಿಡುಗಡೆ, ಸಾಮಾಜಿಕ ಕಾರ್ಯಕ್ರಮಗಳ ಘೋಷಣೆ

ಸಿರವಾರ, ಜನವರಿ 1: ರಾಯಚೂರು ಜಿಲ್ಲೆಯ ಸಿರವಾರ ತಾಲೂಕಿನಲ್ಲಿ ಕರ್ನಾಟಕ ರಾಜ್ಯ ನದಾಫ್ ಪಿಂಜಾರ ಸಂಘದ ಜಿಲ್ಲಾ ಘಟಕ ಪದಾಧಿಕಾರಿಗಳ ಸಭೆಯನ್ನು ಇಂದು ನಡೆಸಲಾಯಿತು. 2026ರ ಹೊಸ ವರ್ಷದ ಕ್ಯಾಲೆಂಡರ್‌ಗಳನ್ನು ಬಿಡುಗಡೆ ಮಾಡಿ, ಸಂಘದ ಭವಿಷ್ಯದ ಕಾರ್ಯಕ್ರಮಗಳ ಬಗ್ಗೆ ಚರ್ಚೆ ನಡೆಸಲಾಯಿತು.



ಸಭೆಯಲ್ಲಿ ಮಾತನಾಡಿದ ಜಿಲ್ಲಾಧ್ಯಕ್ಷ ಮೌಲಾಸಾಬ್ ಗಣದಿನ್ನಿ, ಪ್ರತಿ ವರ್ಷದಂತೆ ಪ್ರತಿಭಾವಂತರಿಗೆ ಪುರಸ್ಕಾರ ನೀಡುವುದಾಗಿ ಘೋಷಿಸಿದರು. ಜೊತೆಗೆ, ಸಮಾಜದ ಬಡವರು ಹೆಣ್ಣುಮಕ್ಕಳಿಗೆ ಸಾಮೂಹಿಕ ಮದುವೆಗಳು, ಗಂಡುಮಕ್ಕಳಿಗೆ ಕೌಶಲ್ಯ ಕಲಿಕೆ ಕಟ್ಟಗಳು ಮತ್ತು ಮಹಿಳೆಯರಿಗೆ ಹೊಲಿಗೆ ಯಂತ್ರ ತರಬೇತಿ ಉಚಿತವಾಗಿ ಒದಗಿಸುವ ಯೋಜನೆಗಳನ್ನು ಜಾರಿಗೆ ತರಲು ಸೂಚಿಸಿದರು. ಇಂತಹ ಕಾರ್ಯಕ್ರಮಗಳ ಮೂಲಕ ಸಮುದಾಯದ ಏಳುಗಾರಕ್ಕೆ ಕೊಡುಗೆ ನೀಡಬೇಕು ಎಂದು ಅವರು ಹೇಳಿದರು.

ಸಭೆಗೆ ಗುಲ್ಬರ್ಗಾ ವಿಭಾಗದ ಉಪಾಧ್ಯಕ್ಷ ಮಹೆಬೂಬ್ ಸಾಬ್ ಲಿಂಗಸೂಗೂರ್, ಸಿರವಾರ ತಾಲೂಕು ಅಧ್ಯಕ್ಷ ಅಮೀದಸಾಬ್ ಭಾಗ್ಯನಗರ್, ಮಮ್ಮದ್ ರೆಹಮತ್ ಅಲಿ ಮಾನ್ವಿ, ಜಂಶೀರದ ಶಕ್ತಿನಗರ್‌ನ ಖಾನಸಾಬ್, ಅಮಿನುದ್ದೀನ್ ಹಟ್ಟಿ, ಶಕ್ಷವಲಿ ಬೂತಲದಿನ್ನಿ ಹಸನ್ ಸಾಬ್ ರಾಮನಾಳ್, ಹನೀಫ್ ರಾಯಚೂರ್, ಮಹೇಬೂಬ್ ಸಬ್ಜಿಲಿ, ರಾಜ್ಯ ಸಮಿತಿ ಸದಸ್ಯರು, ಜಿಲ್ಲಾ ಸಮಿತಿ ಸದಸ್ಯರು, ಎಲ್ಲಾ ತಾಲೂಕು ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು ಭಾಗವಹಿಸಿದ್ದರು.

ಜಿಲ್ಲಾ ಕಾರ್ಯದರ್ಶಿ ಮಮ್ಮದ್ ಮಾಡಗಿರಿ ಸ್ವಾಗತ ಕೋರಿದರು. ನದೀಮ್ ಸಾಬ್ ವಂದನೆ ಅರ್ಪಿಸಿ ಸಭೆಯನ್ನು ಸಮಾಪನಗೊಳಿಸಿದರು.

ಪ್ರಬುದ್ಧ ಅಕಾಡೆಮಿ ಸ್ಪರ್ಧಾತ್ಮಕ ತರಬೇತಿ ಕೇಂದ್ರಕ್ಕೆ ಜಿಲ್ಲಾಧಿಕಾರಿ ಭೇಟಿ, ಪರಿಶೀಲನೆ



ಕಲಬುರಗಿ,ಜ.01-

ಸಮಾಜ ಕಲ್ಯಾಣ ಇಲಾಖೆಯಿಂದ ಕಲಬುರಗಿ ನಗರದ ಹೊರವಲಯದ ಅಟಲ್ ಬಿಹಾರಿ ವಾಜಪೇಯಿ ಬಡಾವಣೆಯಲ್ಲಿ ಕೆ.ಕೆ.ಆರ್.ಡಿ.ಬಿ. ಅನುದಾನದಡಿ ಅಂದಾಜು 25 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗಿರುವ ಪರೀಕ್ಷಾ ಪೂರ್ವ ಉಚಿತ ತರಬೇತಿ ಕೇಂದ್ರ, ಪ್ರಬುದ್ಧ ಅಕಾಡೆಮಿಗೆ ಭೇಟಿ ನೀಡಿದ ಜಿಲ್ಲಾಧಿಕಾರಿ ಬಿ.ಫೌಝಿಯಾ ತರನ್ನುಮ್ ಅವರು ಸ್ಥಳ ಪರಿಶೀಲಿಸಿದರು.

ಸುಮಾರು 10,449,35 ಚ.ಮೀ ವಿಸ್ತೀರ್ಣ ಹೊಂದಿರುವ ಪ್ರಬುದ್ಧ ಅಕಾಡೆಮಿ ತರಬೇತಿ ಕೇಂದ್ರವು ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಮನೋಭಾವನೆ ಹೆಚ್ಚಿಸುವ ಗುರಿಯೊಂದಿಗೆ ಉಚಿತ ಮತ್ತು ಗುಣಮಟ್ಟದ ತರಬೇತಿಯನ್ನು ನೀಡುವ ಉದ್ದೇಶ ಹೊಂದಿದ್ದು, ಶೀಘ್ರವೇ ಕೇಂದ್ರ ಆರಂಭಕ್ಕೆ ಎಲ್ಲಾ ರೀತಿಯ ಸಿದ್ಧತೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಡಿ.ಸಿ. ನಿರ್ದೇಶನ ನೀಡಿದರು.

ಕೇಂದ್ರ ಲೋಕಸೇವಾ ಆಯೋಗ ಮತ್ತು ಕರ್ನಾಟಕ ಲೋಕಸೇವಾ ಆಯೋಗದ ವತಿಯಿಂದ ನಡೆಯುವ ಪ್ರಮುಖ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿ ನಡೆಸುತ್ತಿರುವ ವಿದ್ಯಾರ್ಥಿಗಳಿಗೆ ಉದ್ದೇಶದೊಂದಿಗೆ ಪ್ರಬುದ್ಧ ಅಕಾಡೆಮಿಯನ್ನು ಸ್ಥಾಪಿಸಲಾಗಿದೆ. ಪ್ರಸ್ತುತ ವಾರ್ಷಿಕ 500 ವಿದ್ಯಾರ್ಥಿಗಳಿಗೆ ತರಬೇತಿ ನೀಡಲು ಯೋಜಿಸಿದ್ದು, ಮುಂದಿನ ದಿನದಲ್ಲಿ ಈ ಸಂಖ್ಯೆ ಹೆಚ್ಚಿಸಿ ಪ್ರದೇಶದ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡುವುದು ಸರ್ಕಾರದ ಉದ್ದೇಶವಾಗಿದೆ ಎಂದು ಡಿ.ಸಿ. ಬಿ.ಫೌಝಿಯಾ ತರನ್ನುಮ್ ತಿಳಿಸಿದರು.

ಈ ಕೇಂದ್ರವು ಆಧುನಿಕ ತಂತ್ರಜ್ಞಾನ ದೊಂದಿಗೆ 125 ವಿದ್ಯಾರ್ಥಿಗಳ ಸಾಮರ್ಥ್ಯ ಹೊಂದಿರುವ ನಾಲ್ಕು ವಿಶಾಲವಾದ ತರಬೇತಿ ಕೊಠಡಿಗಳನ್ನು ಹೊಂದಿದೆ. ಅಂದಾಜು 100 ವಿದ್ಯಾರ್ಥಿ ಸಾಮರ್ಥ್ಯದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅವಶ್ಯವಿರುವ ಎಲ್ಲಾ ಪುಸ್ತಕಗಳನ್ನು ಒಳಗೊಂಡ ಸುಸಜ್ಜಿತ ಗ್ರಂಥಾಲಯ, ಆಡಳಿತ ವಿಭಾಗ, ಡಿಜಿಟಲ್ ಲೈಬ್ರರಿ, ಮೆಂಟರಿಂಗ್ ಕೊಠಡಿಗಳು, ಸ್ವ-ಅಧ್ಯಯನಕ್ಕಾಗಿ ಕ್ಯುಬಿಕಲ್ಸ್ ಸೌಲಭ್ಯ ಇದೆ. ಇದಲ್ಲದೆ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ರಿಯಾಯಿತಿ ದರದಲ್ಲಿ ಉಪಹಾರ ಕೇಂದ್ರ ಹಾಗೂ ಉತ್ತಮ ಪರಿಸರದ ವಾತಾವರಣ ಇಲ್ಲಿ ಕಲ್ಪಿಸಲಾಗಿದೆ.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪ್ರೀತಿ ದೊಡ್ಡಮನಿ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಸೋಮಶೇಖರ, ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿ ಸಂಗಮೇಶ, ಕೆ.ಆರ್.ಐ.ಡಿ.ಎಲ್ ಕಾರ್ಯನಿರ್ವಾಹಕ ಅಭಿಯಂತ ಸೌರಭ್ ಸೇರಿದಂತೆ ಇತರೆ ಅಧಿಕಾರಿಗಳು ಇದ್ದರು.

ಹುಬ್ಬಳ್ಳಿಯ ಮರ್ಯಾದೆಗೇಡು ಹತ್ಯೆ ಖಂಡಿಸಿ ಪ್ರಗತಿಪರ ಸಂಘಟನೆಗಳ ಒಕ್ಕೂಟದಿಂದ ಪ್ರತಿಭಟನೆ



ಬೀದರ್,ಜ.01-

ಹುಬ್ಬಳ್ಳಿಯಲ್ಲಿ ನಡೆದ ಮರ್ಯಾದೆಗೇಡು ಹತ್ಯೆ ಖಂಡಿಸಿ ಪ್ರಗತಿಪರ ಸಂಘಟನೆಗಳ ಒಕ್ಕೂಟದಿಂದ ಪ್ರತಿಭಟನೆ ನಡೆಸಲಾಯಿತು.

ಬುಧವಾರ ನಗರದ ಅಂಬೇಡ್ಕರ್ ವೃತ್ತದಲ್ಲಿ ಪ್ರಗತಿಪರ ಸಂಘಟನೆಗಳ ಒಕ್ಕೂಟದ ಪ್ರಮುಖರು ಹಾಗೂ ನಾಗರೀಕರು ಸೇರಿ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರಗಳ ವಿರುದ್ಧ ಘೋಷಣೆಗಳು ಕೂಗುತ್ತಾ ಆಕ್ರೋಶ ವ್ಯಕ್ತಪಡಿಸಿದರು. ನಂತರ ಭಗತ ಸಿಂಗ್ ವೃತ್ತದ ಮೂಲಕ ತಹಶೀಲ್ದಾರ್ ಕಚೇರಿಗೆ ಪ್ರತಿಭಟನಾ ಮೆರವಣಿಗೆ ಮೂಲಕ ಸಾಗಿ ತಹಶೀಲ್ದಾರ ಮೂಲಕ ರಾಷ್ಟ್ರಪತಿ ಹಾಗೂ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ಬಾಬುರಾವ್ ಹೊನ್ನಾ ಅವರು ಮಾತನಾಡಿ, ಲಿಂಗಾಯತ ಸಮುದಾಯದ ಯುವತಿ ಮಾದಿಗ ಸಮುದಾಯದ ಹುಡಗನನ್ನು ಪ್ರೀತಿಸಿ ಮದುವೆಯಾಗಿದ್ದಳು. ಅವಳು ಏಳು ತಿಂಗಳ ಗರ್ಭಿಣಿಯಾಗಿದ್ದರೂ ಕೂಡ ಆಕೆಯ ತಂದೆಯೇ ಅವಳನ್ನು ಕೊಲೆ ಮಾಡಿದ್ದಾನೆ. ಇದನ್ನು ನಾವು ತೀವ್ರವಾಗಿ ಖಂಡಿಸುತ್ತೇವೆ ಎಂದರು.

ಆ ಹುಡುಗನ ಕುಟುಂಬಕ್ಕೆ ರಕ್ಷಣೆ ನೀಡಬೇಕು. ಅಂತರ್ಜಾತಿ ವಿವಾಹವಾಗುವವರಿಗೆ ಸರ್ಕಾರಿ ಹುದ್ದೆ, ಒಂದು ಮನೆ ಹಾಗೂ ಅವರಿಗೆ ನೀಡುವ ಹಣ 10 ಲಕ್ಷ ರೂ. ಗೆ ಏರಿಸಬೇಕು ಎಂದು ಅವರು ಒತ್ತಾಯಿಸಿದರು.

ಶೀಲಾ ಸಾಗರ್ ಅವರು ಮಾತನಾಡಿ, ಹೆತ್ತ ತಂದೆಯೇ ಗರ್ಭಿಣಿಯಾಗಿದ್ದ ತನ್ನ ಮಗಳನ್ನು ಕೊಂದಿದ್ದು ತುಂಬಾ ಭಯಾನಕವಾದ ಸಂಗತಿಯಾಗಿದೆ. ಆತ ತನ್ನ ಮಗಳನ್ನೇ ಕೊಂದಿದ್ದಾನೆ ಎಂದರೆ ಇತರರನ್ನು ಕೊಲ್ಲುವುದು ಸಹಜವಾಗಿರುತ್ತದೆ. ಇದು ಪ್ರತಿಯೊಬ್ಬರ ಕುಟುಂಬದ ಸಮಸ್ಯೆಯಾಗಿದೆ. ಇದನ್ನು ನಾವು ಗಂಭೀರವಾಗಿ ಪರಿಗಣಿಸಿ, ಯೋಚಿಸಬೇಕು ಎಂದರು.

ಈ ಸಂದರ್ಭದಲ್ಲಿ ಕುರೇಶಿ ಕಾನ್ಫರೆನ್ಸ್ ನ ರಾಜ್ಯಧ್ಯಕ್ಷ ನಬಿ ಖುರೇಷಿ, ದಲಿತ ಸಂಘರ್ಷ ಸಮಿತಿಯ ಜಿಲ್ಲಾ ಸಂಚಾಲಕ ಹಾಗೂ ರಾಜ್ಯ ಉಪಾಧ್ಯಕ್ಷ ರಾಜಕುಮಾರ ಮೂಲಭಾರತಿ, ಎಐಕೆಎಸ್ ಜಿಲ್ಲಾಧ್ಯಕ್ಷ ನಜೀರ್ ಅಹ್ಮದ್, ಆರ್‌ಪಿಐ ಜಿಲ್ಲಾ ಮತ್ತು ರಾಜ್ಯ ಸಂಚಾಲಕ ಮಹೇಶ್ ಗೋರನಾಳಕರ್, ಎಂ.ಡಿ ಶಫಾಯತ್ ಅಲಿ, ಜೈಶಿಲ್ ಕುಮಾರ, ವಿರಶೆಟ್ಟಿ ವಟಂಬೆ, ಜಗನ್ನಾಥ್ ಹೊನ್ನಾ, ಮಾರುತಿ ಸೂರ್ಯವಂಶಿ, ನಿಜಾಮುದ್ದಿನ್, ರಾಜಕುಮಾರಸಿಂದೆ, ಖದಿರಮಿಯ್ಯಾ, ಪ್ರಭು ಹೊಚಕನಳ್ಳಿ, ಅರುಣ್ ಪಟೇಲ್, ಓಂಪ್ರಕಾಶ್ ರೊಟ್ಟೆ, ಜಗದೀಶ್ವರ ಬಿರಾದಾರ, ಮಲ್ಲಿಕಾರ್ಜುನ್ ಚಿಟ್ಟಾ, ಸಂದೀಪ್ ಕಾಂಟೆ, ವಸಿಮ್ ಕಿರಮಣಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.

ವಿದ್ಯಾರ್ಥಿಗಳ ಶೈಕ್ಷಣಿಕ ಪ್ರವಾಸದಲ್ಲಿ ಸುರಕ್ಷತೆಗೆ ಆದ್ಯತೆ ನೀಡಿ: ಜಹಿರೋದ್ದಿನ್ ಪಟೇಲ್



ಕಲಬುರಗಿ,ಜ.01

ತಾಲೂಕಿನ ಸುಲೇಪೇಟ ಗ್ರಾಮದ ಕರ್ನಾಟಕ ಪಬ್ಲಿಕ್ ಶಾಲೆಯ (ಕಾಲೇಜು ವಿಭಾಗ) ವಿದ್ಯಾರ್ಥಿಗಳು ಒಂದು ದಿನದ ಶೈಕ್ಷಣಿಕ ಪ್ರವಾಸಕ್ಕೆ ಕೆಪಿಎಸ್ ಶಾಲೆಯ ಎಸ್.ಡಿಎಂಸಿ ಉಪಾಧ್ಯಕ್ಷ ಜಹಿರೋದ್ದಿನ್ ಪಟೇಲ್ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಹಿರೋದ್ದಿನ್ ಪಟೇಲ್ ಅವರು, ಪ್ರವಾಸದಲ್ಲಿ ಮಕ್ಕಳು ಉಪನ್ಯಾಸಕರ ಮಾರ್ಗದರ್ಶನದಲ್ಲಿ ಇರಬೇಕು ಮತ್ತು ಪ್ರವಾಸದ ಸಮಯದಲ್ಲಿ ವಿದ್ಯಾರ್ಥಿಗಳಿಗೂ ತೊಂದರೆಯಾಗದಂತೆ ನೋಡಿಕೊಳ್ಳಬೇಕು, ಪ್ರವಾಸಿ ತಾಣದಲ್ಲಿ ವಿದ್ಯಾರ್ಥಿಗಳು ಒಬ್ಬೊಬ್ಬರೆ ಸುತ್ತಾಡದೇ ಸುರಕ್ಷಿತವಾಗಿ ಪ್ರವಾಸವನ್ನು ಮುಗಿಸಿಕೊಳ್ಳಬೇಕು ಹಾಗೂ ಮಕ್ಕಳು ಪ್ರವಾಸದ ಸಂದಭ್ರ್ದಲ್ಲಿ ಶಿಕ್ಷಕರು ಸುರಕ್ಷತೆ ಕಾಪಾಡಿಕೊಳ್ಳಬೇಕು ಎಂದು ಹೇಳಿದರು.

ಉಪನ್ಯಾಸಕ ಶರಣಬಸಪ್ಪ ಗಂಗಾಣರ್ಕ ಮಾತನಾಡಿದರು.

ಈ ವೇಳೆ ಪ್ರಚಾರ್ಯ ನೀರಖಾವೋದ್ದಿನ್ , ಅಕ್ರಮ ಪಟೇಲ್, ಶರಣಬಸಪ್ಪ ಗಣಗಕರ , ಮಲ್ಲಿನಾಥ, ಅಣ್ಣರಾಯ ವಡ್ಡಳಿ, ಗಂಗಾಧರ ಹೋಸಳ್ಳಿ, ಮಧುಕರ, ಉಮೇಶ, ಜಗನಮೋಹನ ರಡ್ಡಿ ಇತರರು ಇದ್ದರು.

ಗ್ರಾಹಕರಿಗೆ ಅನ್ಯಾಯವಾದರೆ ಅಂಜದೆ ದೂರು ನೀಡಿ: ಸೌಭಾಗ್ಯಲಕ್ಷ್ಮೀ

ಯಲಬುರ್ಗಾ,ಜ.01-

ಯಾವುದೇ ತಯಾರಕರು ಅಥವಾ ಮಾರಾಟಗಾರರಿಂದ ಗ್ರಾಹಕರಿಗೆ ಅನ್ಯಾಯವಾದಲ್ಲಿ ಯಾರಿಗೂ ಅಂಜದೇ ಗ್ರಾಹಕರ ವ್ಯಾಜ್ಯಗಳ ಪರಿಹಾರ ವೇದಿಕೆಗೆ ದೂರು ದಾಖಲಿಸಬೇಕು ಎಂದು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷೆ ಜಿ.ಇ.ಸೌಭಾಗ್ಯಲಕ್ಷ್ಮೀ ಹೇಳಿದರು.



ಪಟ್ಟಣದ ಕಂದಾಯ ಭವನದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಹಾರ-ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಸೇರಿದಂತೆ ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ಗ್ರಾಹಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಖರೀದಿಸುವ ವಸ್ತುವಿನ ಬೆಲೆ ಕಡಿಮೆಯಿದ್ದರೂ ಅದರ ಗುಣಮಟ್ಟ ಸರಿಯಾಗಿರದಿದ್ದರೆ ರಶೀದಿ ಸಮೇತ ದೂರು ದಾಖಲಿಸಬೇಕು. ಇದರಿಂದ ತಯಾರಕರು ಹಾಗೂ ಮಾರಾಟಗಾರರು ಎಚ್ಚೆತ್ತುಕೊಳ್ಳುವಂತೆ ಆಗುತ್ತದೆ. ಜೊತೆಗೆ ಮುಂದಿನ ಗ್ರಾಹಕರಿಗೆ ಆಗುವ ಅನ್ಯಾಯವನ್ನು ತಡೆಯಲು ಸಹಕಾರಿಯಾಗುತ್ತದೆ. ಅನ್ಯಾಯಕ್ಕೊಳಗಾದ ಗ್ರಾಹಕರಿಗೆ ಗ್ರಾಹಕರ ವೇದಿಕೆ ಸೂಕ್ತ ಪರಿಹಾರ ಒದಗಿಸುತ್ತದೆ ಎಂದರು.

ಜಿಲ್ಲಾ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಉಪನಿರ್ದೇಶಕ ಸೋಮಶೇಖರ ಬಿರಾದಾರ ಮಾತನಾಡಿ, ಗ್ರಾಮೀಣ ಪ್ರದೇಶಗಳಲ್ಲಿಯೂ ಗ್ರಾಹಕ ಜಾಗೃತಿ ಮೂಡಿಸುವ ಉದ್ದೇಶದಿಂದ ತಾಲೂಕು ಮಟ್ಟದಲ್ಲಿ ಇಂತಹ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದರು.

ಕೊಪ್ಪಳದ ನ್ಯಾಯವಾದಿ ಹಾಗೂ ಹೋರಾಟಗಾರ್ತಿ ಸಾವಿತ್ರಿ ಮುಜುಮದಾರ ವಿಶೇಷ ಉಪನ್ಯಾಸ ನೀಡಿ, ವಸ್ತು ಖರೀದಿಯಲ್ಲಿ ಮಹಿಳೆಯರು ಹೆಚ್ಚಾಗಿ ಮೋಸಕ್ಕೆ ಒಳಗಾಗುತ್ತಿದ್ದಾರೆ ಎಂದು ಆತಂಕ ವ್ಯಕ್ತಪಡಿಸಿದರು.

ಜಾಹೀರಾತುಗಳಿಗೆ ಮರುಳಾಗದೇ ಗುಣಮಟ್ಟದ ವಸ್ತುಗಳಿಗೆ ಆದ್ಯತೆ ನೀಡಬೇಕು. ಇತ್ತೀಚೆಗೆ ಸೈಬರ್ ಹಾಗೂ ಡಿಜಿಟಲ್ ವಂಚನೆಗಳು ಹೆಚ್ಚುತ್ತಿದ್ದು, ಸಾವಿರಾರು ಕೋಟಿ ರೂ. ಮೌಲ್ಯದ ವಂಚನೆ ನಡೆದಿದೆ ಎಂದು ವಿಷಾದಿಸಿದರು.

ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸದಸ್ಯ ರಾಜು ಮೇತ್ರಿ, ತಹಶೀಲ್ದಾರ್ ಪ್ರಕಾಶ ನಾಶಿ, ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ನೀಲಗಂಗಮ್ಮ ಮಾತನಾಡಿದರು.

ಕಾರ್ಯಕ್ರಮದಲ್ಲಿ ತಾಲೂಕಿನ ನ್ಯಾಯಬೆಲೆ ಅಂಗಡಿ ಮಾಲಕರು, ಆಸಕ್ತ ಗ್ರಾಹಕರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

ಆಹಾರ ಇಲಾಖೆಯ ಮಲ್ಲಿಕಾರ್ಜುನ ಪ್ರಾರ್ಥಿಸಿದರು. ಸಹಾಯಕ ನಿರ್ದೇಶಕ ಕೆ.ಆರ್.ದೇವರಾಜು ಸ್ವಾಗತಿಸಿದರು. ಶಿವಮೂರ್ತಿ ಇಟಗಿ ಭಾವಗೀತೆ ಹಾಡಿದರು. ಸರ್ಕಾರಿ ಅಪರ ವಕೀಲ ಮಲ್ಲನಗೌಡ ಪಾಟೀಲ ನಿರೂಪಿಸಿ ವಂದಿಸಿದರು.

ಗ್ರಾಮದ ಅಭಿವೃದ್ಧಿಗೆ ಅಧಿಕಾರಿಗಳ ನಿರ್ಲಕ್ಷ್ಯ : ನಾಗರಾಜ್ ವೆಂಕಟಾಪುರ ಅಸಮಾಧಾನ

ಕುಕನೂರು,ಜ.01

ಗ್ರಾಮದ ಸರ್ವಾಂಗಿಣ ಅಭಿವೃದ್ಧಿಗೆ ಸಂಬಂಧಿಸಿದಂತೆ ಅಧಿಕಾರಿಗಳು ಹಾಗೂ ಕೆಲ ಗ್ರಾಮ ಪಂಚಾಯತ್ ಸದಸ್ಯರು ಸಮರ್ಪಕವಾಗಿ ಸ್ಪಂದಿಸುತ್ತಿಲ್ಲ ಎಂದು ಬನ್ನಿಕೊಪ್ಪ ಗ್ರಾಮ ಪಂಚಾಯತ್ ಅಧ್ಯಕ್ಷ ನಾಗರಾಜ್ ವೆಂಕಟಾಪುರ ಅವರು ಅಸಮಾಧಾನ ವ್ಯಕ್ತಪಡಿಸಿದರು.



ಪಟ್ಟಣದ ಪ್ರವಾಸಿ ಮಂದಿರದಲ್ಲಿ ಮಂಗಳವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಅಗತ್ಯವಿರುವ ಅನುದಾನಗಳು ಸಮಯಕ್ಕೆ ಸರಿಯಾಗಿ ಲಭ್ಯವಾಗುತ್ತಿಲ್ಲ. ಪರಿಣಾಮವಾಗಿ ಅನೇಕ ಅಭಿವೃದ್ಧಿ ಕಾಮಗಾರಿಗಳು ಸ್ಥಗಿತಗೊಂಡಿದ್ದು, ವಸತಿ ಯೋಜನೆಗಳ ಜಾರಿಯೂ ಸಮರ್ಪಕವಾಗಿ ನಡೆಯುತ್ತಿಲ್ಲ. ಜನರ ವಿಶ್ವಾಸದ ಮೇಲೆ ಆಯ್ಕೆಯಾದರೂ ನೀಡಿದ ಭರವಸೆಗಳನ್ನು ಈಡೇರಿಸಲು ಸಾಧ್ಯವಾಗುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಬನ್ನಿಕೊಪ್ಪ ಗ್ರಾಮ ಪಂಚಾಯತ್ ವ್ಯಾಪ್ತಿಯ 144 ನಿವೇಶನಗಳಲ್ಲಿ ಈಗಾಗಲೇ 122 ನಿವೇಶನಗಳ ಹಕ್ಕುಪತ್ರಗಳನ್ನು ವಿತರಿಸಲಾಗಿದೆ. ಆದರೆ ಪಂಚಾಯತ್ ಅಧಿಕಾರಿಗಳಿಂದ ನಿರೀಕ್ಷಿತ ಸಹಕಾರ ದೊರೆಯುತ್ತಿಲ್ಲ. ಈ ಕುರಿತು ಶಾಸಕರು, ಸಚಿವರು ಹಾಗೂ ಮೇಲಾಧಿಕಾರಿಗಳಿಗೆ ಹಲವು ಬಾರಿ ಮನವಿ ಸಲ್ಲಿಸಿದರೂ ಯಾವುದೇ ಸ್ಪಂದನೆ ಸಿಗುತ್ತಿಲ್ಲ ಎಂದು ಆರೋಪಿಸಿದರು.

ರಾಜ್ಯ ಸರ್ಕಾರದ ಡಿಜಿಟಲೀಕರಣ ಯೋಜನೆಯಡಿ ಬನ್ನಿಕೊಪ್ಪ ಗ್ರಾ.ಪಂ. ಗ್ರಂಥಾಲಯಕ್ಕೆ ನೀಡಬೇಕಾದ 56 ಇಂಚಿನ ಆಂಡ್ರಾಯ್ಡ್ ಎಲ್‌ಇಡಿ ಟಿವಿಯನ್ನು ತಾಲೂಕು ಪಂಚಾಯತ್ ಕಚೇರಿ ಸ್ವೀಕರಿಸಿದ್ದರೂ, ಇದುವರೆಗೆ ಗ್ರಂಥಾಲಯಕ್ಕೆ ಒದಗಿಸಿಲ್ಲ. ಈ ವಿಷಯವಾಗಿ ಪುನಃಪುನಃ ಮನವಿ ಮಾಡಿದರೂ ಅಧಿಕಾರಿಗಳ ಜಾಣ ಕುರುಡುತನದಿಂದ ಅನುಮಾನಗಳು ಮೂಡುತ್ತಿವೆ. ಈ ಕುರಿತು ಮೇಲಾಧಿಕಾರಿಗಳು ಸ್ಪಷ್ಟನೆ ನೀಡಿ ಸೂಕ್ತ ತನಿಖೆ ನಡೆಸಬೇಕು ಎಂದು ಅವರು ಆಗ್ರಹಿಸಿದರು.

ಇದೇ ಸಂದರ್ಭದಲ್ಲಿ, ಬನ್ನಿಕೊಪ್ಪ ಗ್ರಾ.ಪಂ. ಕಚೇರಿಯಲ್ಲಿ ಸೇವೆ ಸಲ್ಲಿಸುತ್ತಿರುವ ಪಿಡಿಒ ದೀರ್ಘಕಾಲದಿಂದ ಕರ್ತವ್ಯಕ್ಕೆ ಗೈರಾಗಿರುವುದರಿಂದ ಪಂಚಾಯತ್ ವ್ಯಾಪ್ತಿಯ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಳ್ಳುತ್ತಿವೆ. ಸಾರ್ವಜನಿಕರಿಗೆ ದೊರೆಯಬೇಕಾದ ಮೂಲಭೂತ ಸೌಲಭ್ಯಗಳು ವಿಳಂಬವಾಗುತ್ತಿದ್ದು, ಈ ವಿಷಯದಲ್ಲಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಮೌನವಹಿಸಿರುವುದು ಸರಿಯಲ್ಲ ಎಂದರು.

ಬೂದು ನೀರಿನ ನಿರ್ವಹಣಾ ಘಟಕಕ್ಕೆ 2 ಕೋಟಿ 13 ಲಕ್ಷ 53 ಸಾವಿರ ರೂ. ಮೊತ್ತದ ಟೆಂಡರ ಪ್ರಕ್ರಿಯೆ ಪೂರ್ಣಗೊಂಡಿದ್ದು, ಅನುದಾನಕ್ಕೂ ಅನುಮೋದನೆ ದೊರೆತಿದ್ದರೂ ಪ್ರಕ್ರಿಯಾತ್ಮಕ ಕಾರಣಗಳಿಂದ ಕಾಮಗಾರಿಗೆ ಇನ್ನೂ ಅಂತಿಮ ಅನುಮೋದನೆ ಸಿಕ್ಕಿಲ್ಲ. ಅಲ್ಲದೆ ಗ್ರಾಮದಲ್ಲಿ ಚರಂಡಿ, ವಿದ್ಯುತ್ ಕಂಬ, ಕುಡಿಯುವ ನೀರಿನ ಘಟಕ ಸೇರಿದಂತೆ ಹಲವು ಮೂಲಭೂತ ಸೌಕರ್ಯಗಳ ಕಾಮಗಾರಿಗಳು ಬಾಕಿಯಿವೆ ಎಂದು ಅವರು ವಿವರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮರಿಗೌಡ ತೆಗ್ಗಿನಮಠ, ಸಿದ್ದಪ್ಪ ಮಾಳಿಕೊಪ್ಪ, ಶಿವಪ್ಪ ಚವಡಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಆಳಂದ ಪುರಸಭೆ ಎದುರು ಬಿಜೆಪಿ ಪ್ರತಿಭಟನೆ

ಕಲಬುರಗಿ,ಜ.01

ಪಟ್ಟಣದ ರಸ್ತೆ ಅಗಲೀಕರಣ ಕಾಮಗಾರಿಯಿಂದ ಆಸ್ತಿ ಕಳೆದುಕೊಂಡು ನಿರಾಶ್ರಿತರಾಗಿರುವ ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳಿಗೆ ಸರ್ಕಾರದಿಂದ ಪರ್ಯಾಯ ನಿವೇಶನಗಳನ್ನು ಮಂಜೂರು ಮಾಡಬೇಕು ಎಂದು ಒತ್ತಾಯಿಸಿ ಭಾರತೀಯ ಜನತಾ ಪಕ್ಷದ ವತಿಯಿಂದ ಬುಧವಾರ ಆಳಂದ ಪುರಸಭೆ ಎದುರು ಪ್ರತಿಭಟನೆ ನಡೆಸಲಾಯಿತು.



ಪ್ರತಿಭಟನೆಯಲ್ಲಿ ಭಾಗವಹಿಸಿದ ಬಿಜೆಪಿ ಮುಖಂಡರು, ರಸ್ತೆ ಅಗಲೀಕರಣದ ನೆಪದಲ್ಲಿ ತಲೆಮಾರುಗಳಿಂದ ವಾಸಿಸುತ್ತಿರುವ ಜನರ ಸ್ವಂತ ಆಸ್ತಿಗಳನ್ನು ಯಾವುದೇ ಪೂರ್ವ ನೋಟಿಸ್ ನೀಡದೇ ತೆರವುಗೊಳಿಸಲಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಹಲವರು ವರ್ಷಗಳಿಂದ ಪುರಸಭೆಗೆ ತೆರಿಗೆ ಪಾವತಿಸಿಕೊಂಡು ಬಂದಿದ್ದು, ಇಂತಹ ಕುಟುಂಬಗಳನ್ನು ಏಕಾಏಕಿ ಮನೆಗಳಿಂದ ಹೊರಹಾಕುವುದು ಅಮಾನುಷ ಕ್ರಮವಾಗಿದೆ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಗ್ರಾಮಾಂತರ ಜಿಲ್ಲಾ ಅಧ್ಯಕ್ಷ ಅಶೋಕ್ ಬಗಲಿ, ಬಿಜೆಪಿ ತಾಲೂಕಾಧ್ಯಕ್ಷ ಮಲ್ಲಿಕಾರ್ಜುನ ವಿ. ಕಂದಗುಳೆ, ಜಿಲ್ಲಾ ಪಂಚಾಯತ್ ಮಾಜಿ ಉಪಾಧ್ಯಕ್ಷ ಹರ್ಷಾರ್‌ಎಸ್. ಗುತ್ತೇದಾರ್, ಪಕ್ಷದ ಜಿಲ್ಲಾ ಕಾರ್ಯದರ್ಶಿ ಸಂತೋಷ್ ಹಾದಿಮನಿ, ತಾಲೂಕು ಪ್ರಧಾನ ಕಾರ್ಯದರ್ಶಿ ಪ್ರಕಾಶ್ ಮನೆ, ಸೀತಾರಾಮ್ ಜಮಾದಾರ, ಮಹೇಶ್ ಗೌಳಿ, ಬಸವರಾಜ್ ಹತ್ತರಕಿ, ಶಿವಪುತ್ರ ನಡಿಗೇರಿ, ನ್ಯಾಯವಾದಿ ಬಾಬಾಸಾಹೇಬ್ ಪಾಟೀಲ್, ಗೌರಿ ಚಿಟ್ಕೋಟಿ, ಚಂದ್ರಶೇಖರ ಹಿರೇಮಠ, ವೀರಣ್ಣ ಮಂಗಣೆ ಸೇರಿದಂತೆ ಅನೇಕ ಹಿರಿಯ-ಕಿರಿಯ ಕಾರ್ಯಕರ್ತರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು. ಪ್ರತಿಭಟನೆ ಬಳಿಕ ಈ ಸಂಬಂಧ ಮುಖ್ಯಮಂತ್ರಿಗಳಿಗೆ ಬರೆದ ಮನವಿಪತ್ರವನ್ನು ಪುರಸಭೆ ಮುಖ್ಯ ಅಧಿಕಾರಿ ಸಂಗಮೇಶ್ ಪನ್ಶೆಟ್ಟಿ ಅವರ ಮೂಲಕ ಸಲ್ಲಿಸಲಾಯಿತು. ಒಂದು ವಾರದೊಳಗೆ ನ್ಯಾಯಯುತ ಬೇಡಿಕೆಗಳಿಗೆ ಸ್ಪಂದಿಸದಿದ್ದರೆ ಜಿಲ್ಲಾಧಿಕಾರಿ ಕಚೇರಿ ಮುಂದೆ ಉಪವಾಸ ಸತ್ಯಾಗ್ರಹ ಸೇರಿದಂತೆ ಉಗ್ರ ಸ್ವರೂಪದ ಹೋರಾಟ ಕೈಗೊಳ್ಳಲಾಗುವುದು ಎಂದು ಬಿಜೆಪಿ ಮುಖಂಡರು ಎಚ್ಚರಿಕೆ ನೀಡಿದರು.

ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಪ್ರಕಟ; 8,936 ಮತದಾರರು: ಡಿ.ಸಿ ಫೌಝಿಯಾ ತರನ್ನುಮ್

ಕಲಬುರಗಿ,ಜ.01-

ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಅಂತಿಮ ಪಟ್ಟಿ ಮಂಗಳವಾರ ಪ್ರಕಟಿಸಲಾಗಿದ್ದು, ಕಲಬುರಗಿ ಜಿಲ್ಲೆಯಾದ್ಯಂತ 4,818 ಪುರುಷರು ಮತ್ತು 4,118 ಮಹಿಳೆಯರು ಸೇರಿ ಒಟ್ಟು 8,936 ಜನ ಮತದಾರರು ಹೆಸರು ನೋಂದಾಯಿಸಿಕೊಂಡಿದ್ದಾರೆ ಎಂದು ಕ್ಷೇತ್ರದ ಸಹಾಯಕ ಮತದಾರರ ನೋಂದಣಾಧಿಕಾರಿಯಾಗಿರುವ ಕಲಬುರಗಿ ಜಿಲ್ಲಾಧಿಕಾರಿ ಬಿ.ಫೌಝಿಯಾ ತರನ್ನುಮ್ ತಿಳಿಸಿದ್ದಾರೆ.

ನ.25 ರಂದು ಪ್ರಕಟಿಸಿದ ಕರಡು ಮತದಾರರ ಪಟ್ಟಿಯಲ್ಲಿ 4,300 ಪುರುಷರು, 3,584 ಮಹಿಳೆಯರು ಸೇರಿ 7,884 ಮತದಾರರು ಹೆಸರು ನೊಂದಾಯಿಸಿಕೊಂಡಿದ್ದರು. ತದನಂತರ ಜರುಗಿದ ನಿರಂತರ ನೋಂದಣಿ ಪ್ರಕ್ರಿಯೆಯಲ್ಲಿ 518 ಪುರುಷರು ಮತ್ತು 534 ಮಹಿಳೆಯರು ಹೆಸರು ಸೇರ್ಪಡೆ ಮಾಡಿಕೊಂಡಿದ್ದು, ಅಂತಿಮವಾಗಿ ಜಿಲ್ಲೆಯಾದ್ಯಂತ 8,936 ಜನ ಮತದಾರರು ನೋಂದಾಯಿ ತರಾಗಿದ್ದಾರೆ.

ಮತದಾರರ ಪಟ್ಟಿಯನ್ನು ಡಿ.ಸಿ. ಕಚೇರಿ ಸೇರಿದಂತೆ ಕಲಬುರಗಿ ಮಹಾನಗರ ಪಾಲಿಕೆ, ಕಲಬುರಗಿ ಹಾಗೂ ಸೇಡಂ ಸಹಾಯಕ ಆಯುಕ್ತರ ಕಚೇರಿ ಹಾಗೂ ತಹಶೀಲ್ದಾರರ ಕಚೇರಿಯಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸಲಾಗಿದ್ದು, ಸಾರ್ವಜನಿಕರು ಪಟ್ಟಿಯನ್ನು ವೀಕ್ಷಿಸಬಹುದಾಗಿದೆ ಎಂದು ಡಿ.ಸಿ. ಅವರು ತಿಳಿಸಿದ್ದಾರೆ.

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ನ.1, 2025ರ ಅರ್ಹತಾ ದಿನವನ್ನಾಗಿ ಪರಿಗಣಿಸಿ ಅಂತಿಮ ಮತದಾರರ ಪಟ್ಟಿಯನ್ನು ಅಂತಿಮಗೊಳಿಸಿದೆ. 16 ಕಿ.ಮೀ ಅಂತರದಲ್ಲಿ ಪ್ರತಿ ಮತಗಟ್ಟೆ ಇದ್ದು, ಕನಿಷ್ಠ 30 ಮತದಾರರು ಒಳಗೊಂಡಿರಬೇಕೆಂಬ ಮಾರ್ಗಸೂಚಿ ಹಿನ್ನೆಲೆಯಲ್ಲಿ ಮತದಾರರ ಸಂಖ್ಯೆ ಅನುಗುಣವಾಗಿ ಪ್ರಸ್ತುತ ಜಿಲ್ಲೆಯಲ್ಲಿ 41 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಮುಂದಿನ ದಿನದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮತದಾರರು ನೋಂದಾಯಿಸಲ್ಪಟ್ಟಿದಲ್ಲಿ ಚುನಾವಣಾ ಸಮಯದಲ್ಲಿ ಇದನ್ನು ಪರಿಷ್ಕರಿಸಲಾಗುವುದು ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಹೆಸರು ಸೇರ್ಪಡೆಗೆ ಡಿ.ಸಿ. ಮನವಿ : ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಅಂತಿಮವಾಗಿದ್ದರು ಸಹ ಚುನಾವಣೆ ಘೋಷಣೆಯಾಗಿ ನಾಮಪತ್ರ ಸಲ್ಲಿಸಲು ನಿಗದಿ ಮಾಡುವ ಕೊನೆಯ ದಿನಾಂಕದವರೆಗೆ ಮತದಾರರ ಪಟ್ಟಿಗೆ ಹೆಸರು ಸೇರಿಸಲು ಅವಕಾಶ ಕಲ್ಪಿಸಿದೆ. ಅರ್ಹ ಮತದಾರರು(ಶಿಕ್ಷಕರು) ಅವಶ್ಯಕ ದಾಖಲೆಗಳೊಂದಿಗೆ ತಮ್ಮ ಹೆಸರನ್ನು ಸಹಾಯಕ ಮತದಾರರ ನೋಂದಣಾಧಿಕಾರಿಗಳಾಗಿರುವ ತಹಶೀಲ್ದಾರರು, ಸಹಾಯಕ ಆಯುಕ್ತರು, ಕಲಬುರಗಿ ಮಹಾ ನಗರ ಪಾಲಿಕೆ ಹಾಗೂ ಜಿಲ್ಲಾಧಿ ಕಾರಿಗಳ ಕಚೇರಿಗೆ ಅರ್ಜಿ ಸಲ್ಲಿಸಿ ಮತದಾರರ ಪಟ್ಟಿಯಲ್ಲಿ ನೋಂದಾ ಯಿಕೊಳ್ಳಬೇಕೆಂದು ಡಿಸಿ ಮನವಿ ಮಾಡಿದ್ದಾರೆ.

ಮಕ್ಕಳಿಗೆ ಶಿಕ್ಷಣದ ಜೊತೆಗೆ ಜೀವನ ಮೌಲ್ಯಗಳು ಅಗತ್ಯ: ಸುಗ್ಗೆನಹಳ್ಳಿ ರಮೇಶ

ಕಂಪ್ಲಿ,ಜ.01-

ತಾಲೂಕಿನ ರಾಮಸಾಗರ ಕಾರ್ಯಕ್ಷೇತ್ರದ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಬಿ.ಸಿ. ಟ್ರಸ್ಟ್ ವತಿಯಿಂದ ತುಂಗಭದ್ರ ಮಹಿಳಾ ಜ್ಞಾನ ವಿಕಾಸ ಕಾರ್ಯಕ್ರಮದಡಿ ಮಕ್ಕಳಿಗೆ ಶಿಕ್ಷಣ ಹಾಗೂ ಜೀವನ ಮೌಲ್ಯಗಳ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮವನ್ನು ಆಯೋಜಿಸಲಾಯಿತು.



ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ್ದ ಸುಗ್ಗೆನಹಳ್ಳಿ ರಮೇಶ ಅವರು, ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳಿಗೆ ಜೀವನದ ಮೌಲ್ಯಗಳ ಕುರಿತು ಮಾಹಿತಿ ನೀಡಿದರು. ಇತ್ತೀಚಿನ ದಿನಮಾನಗಳಲ್ಲಿ ಶಿಕ್ಷಣದ ಜೊತೆಗೆ ಜೀವನ ಮೌಲ್ಯಗಳು ಕುಗ್ಗುತ್ತಿರುವುದು ಮಕ್ಕಳ ಭವಿಷ್ಯಕ್ಕೆ ಅಪಾಯಕಾರಿಯಾಗಿದೆ. ಇಂತಹ ಜಾಗೃತಿ ಕಾರ್ಯಕ್ರಮಗಳು ಮಕ್ಕಳಲ್ಲಿ ಮೌಲ್ಯಗಳು, ಸಂಸ್ಕೃತಿ ಹಾಗೂ ಸಂಸ್ಕಾರಗಳನ್ನು ಬೆಳೆಸಲು ಸಹಕಾರಿಯಾಗುತ್ತವೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಪ್ರಭಾರಿ ಮುಖ್ಯಗುರು ರಾಮಮೋಹನ್ ಎಸ್., ಎಸ್ಡಿಎಂಸಿ ಅಧ್ಯಕ್ಷ ಪ್ರಶಾಂತ, ಶಿಕ್ಷಕರು, ವಲಯದ ಮೇಲ್ವಿಚಾರಕಿ ಜಯಲಕ್ಷ್ಮಿ, ಶೈಲಜಾ ಇದ್ದರು.

ಒಂದನೇಯ ಪುಟದಿಂದ

ಕೋಗಿಲು ಪ್ರಕರಣದಲ್ಲಿ ಮನೆ ಕೊಟ್ಟರೆ ನ್ಯಾಯಾಲಯದಲ್ಲಿ ಪ್ರಶ್ನೆ, ರಾಜ್ಯಪಾಲರಿಗೆ ದೂರು

ನಿರ್ಮಾಣ ಮಾಡಿದ ಮುಖ್ಯಮಂತ್ರಿಗಳ ಒಂದು ಲಕ್ಷ ಮನೆ ಅಥವಾ ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ತರಾತುರಿಯಲ್ಲಿ ಮನೆಗಳನ್ನು ಕೊಡಬೇಕು ಅಂತ ರಾಜ್ಯ ಸರ್ಕಾರ ಹೊರಟಿದೆ ಎಂದು ಆಕ್ಷೇಪಿಸಿದರು.

ಸಭೆಯಲ್ಲಿ ಶಾಸಕ ಎಸ್.ಆರ್. ವಿಶ್ವನಾಥ್, ವಿಧಾನ ಪರಿಷತ್ತಿನ ಸದಸ್ಯ ಕೆ.ಎಸ್. ನವೀನ್, ರಾಜ್ಯ ಕಾರ್ಯದರ್ಶಿ ತಮ್ಮೇಶ್ ಗೌಡ, ನಿವೃತ್ತ ಐಪಿಎಸ್ ಅಧಿಕಾರಿ ಭಾಸ್ಕರ ರಾವ್, ಬೆಂಗಳೂರು ಉತ್ತರ ಜಿಲ್ಲಾ ಅಧ್ಯಕ್ಷ ಎಸ್. ಹರೀಶ್ ಅವರು ಭಾಗವಹಿಸಿದ್ದರು.

ದಿ.3ರಂದು ವಿದ್ಯಾರ್ಥಿಗಳ ನಡೆ - ಸಂವಿಧಾನದ ಕಡೆ

ಇಲಾಖೆ ಉಪನಿರ್ದೇಶಕ ನವೀನಕುಮಾರ ಯು., ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕ ಕೆ.ಡಿ. ಬಡಿಗೇರ ಹಾಗೂ ಜಿಲ್ಲಾ ಸರಕಾರಿ ನೌಕರರ ಸಂಘದ ಅಧ್ಯಕ್ಷ ಕೃಷ್ಣ ಶಾವಂತಗೇರಾ ಗೌರವ ಉಪಸ್ಥಿತರಾಗಲಿದ್ದಾರೆ.

ಈ ಸಂದರ್ಭದಲ್ಲಿ ವಿಶ್ವಜ್ಞಾನಿ ಡಾ. ಬಿ.ಆರ. ಅಂಬೇಡ್ಕರ ಪ್ರಶಸ್ತಿ, ಮಾತೆ ಸಾವಿತ್ರಿಬಾಯಿ ಫುಲೆ ಶಿಕ್ಷಣ ಸಿರಿ' ಪ್ರಶಸ್ತಿ ಹಾಗೂ ಡಾ. ಅಬ್ದುಲ್ ನಜೀರ ಸಾಬ್ ಸ್ಮಾರಕ ಪ್ರಶಸ್ತಿಗಳನ್ನು ವಿವಿಧ ಕ್ಷೇತ್ರಗಳ ಸಾಧಕರಿಗೆ ಪ್ರದಾನಿಸಲಾಗುತ್ತದೆ. 2025-26ನೇ ಸಾಲಿನ ಮಾತೆ ಸಾವಿತ್ರಿಬಾಯಿ ಫುಲೆ ಪ್ರಶಸ್ತಿ ಪುರಸ್ಕೃತರೂ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಎಂ.ಆರ. ಬೇರಿ (ನಿರ್ದೇಶಕರು), ಬಸವರಾಜ್ ಸಿಂಗ್ರಿ (ಅಧ್ಯಕ್ಷರು), ರಂಗ ಮುನಿದಾಸ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ರಾಷ್ಟ್ರೀಯ ಮಹಿಳಾ ಕಾಂಗ್ರೆಸ್ ಸಮಿತಿಯ ಕಾರ್ಯದರ್ಶಿಯಾಗಿ ಶ್ರೀದೇವಿ ಆರ್‌ನಾಯಕ

ಸ್ಪರ್ಧಿಸಿದ್ದರು. ಮಾಜಿ ಸಂಸದರು ಹಾಗೂ ಹಿರಿಯ ನಾಯಕರಾದ ದಿ ವೆಂಕಟೇಶ್ ನಾಯಕ ಅವರ ಕುಟುಂಬದವರಾಗಿದ್ದು, ಸಕ್ರಿಯ ರಾಜಕೀಯ ಹಿನ್ನೆಲೆ ಹಿನ್ನೆಲೆಯಲ್ಲಿ ಇವರನ್ನು ರಾಷ್ಟ್ರೀಯ ಕಾಂಗ್ರೆಸ್ ಸಮಿತಿಯ ಕಾರ್ಯದರ್ಶಿಗಳನ್ನು ನೇಮಿಸಿ ಮಹಿಳಾ ಘಟಕ ಬಲವರ್ಧನೆಗೆ ಸಕ್ರಿಯ ಮತ್ತು ಸಮರ್ಥವಾಗಿ ಕಾರ್ಯನಿರ್ವಹಿಸುವಂತೆ ಸೂಚಿಸಲಾಗಿದೆ.

ವರ್ಣಾಶ್ರಮ ವ್ಯವಸ್ಥೆಯ ಪೋಷಣೆಗೆ ಕರೆ ನೀಡಿದ ಕನೇರಿಮಠದ ಸ್ವಾಮಿ ವಿರುದ್ಧ ಪ್ರಕರಣ ದಾಖಲಿಸಿ : ಆರ್.ಮಾನಸಯ್ಯ

ತಂದುಕೊಟ್ಟಿದೆ. ಇನ್ನು ಮುಂದೆ ದಲಿತರು ಜಾತಿ ನಾಶದ ಹೋರಾಟವನ್ನು ಮತ್ತಷ್ಟು ಬಲಪಡಿಸಬೇಕು'' ಎಂದು ಅವರು ಕರೆ ನೀಡಿದರು.

ಈ ಸಂದರ್ಭದಲ್ಲಿ ಸಿ.ದಾನಪ್ಪ ನಿಲೊಗಲ್, ದೊಡ್ಡಪ್ಪ ಮುರಾರಿ, ಹೆಚ್.ಎನ್. ಬಡಿಗೇರ, ಚಿದಾನಂದ ನಾಯಕ, ಮೀನಾ ಕುಮಾರಿ, ಗಂಗಾಧರ ನೀರಲಕೇರಿ ಸೇರಿದಂತೆ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು.

ನದಿಯ ನೀರು ಕುಡಿಯುವುದಕ್ಕೂ ಯೋಗ್ಯವಾಗಿಲ್ಲ : ಪಾಟೀಲ್

ಗುತ್ತಿದ್ದು 6 ನೂರು ಕಿ.ಮೀ. ಪಾದ ಯಾತ್ರೆ ಮೂಲಕ ಜಲ ಜಾಗೃತಿ ಜನ ಜಾಗ್ರತಿಯನ್ನು ಮೂಡಿಸುವು ದರೊಂದಿಗೆ ಪಾದಯಾತ್ರೆಯಲ್ಲಿ ಭಾಗವಹಿಸಿರುವ ತಜ್ಞರು ತುಂಗ ಭದ್ರಾ ನದಿಯನ್ನು ಅಧ್ಯಯನ ಮಾಡಿ ವರದಿಯನ್ನು ಸಿದ್ದಪಡಿಸಿ ಮುಖ್ಯಮಂತ್ರಿಗಳಿಗೆ ಸಲ್ಲಿಸಲಾಗು ವುದು ಎಂದು ನಿರ್ಮಲ ತುಂಗ ಭದ್ರಾ ಅಭಿಯಾನ ಸಂಚಾಲಕ ಮಹಿಮಾ ಪಾಟೀಲ್ ತಿಳಿಸಿದರು. ತಾಲೂಕಿನ ಪೋತ್ನಾಳ್‌ಗ್ರಾಮದಲ್ಲಿನ ಶ್ರೀಕನ್ನಿಕಾಪರಮೇಶ್ವರಿ ದೇವಸ್ಥಾನ ದಲ್ಲಿ ರಾಷ್ಟ್ರೀಯ ಸ್ವಾಭಿಮಾನ ಆಂದೋಲನ ನವದೆಹಲಿ ಹಾಗೂ ಪರ್ಯಾವರಣ ಟ್ರಸ್ಟ್ ಶಿವಮೊಗ್ಗ, ನಿರ್ಮಲ ತುಂಗಭದ್ರಾ ಅಭಿಯಾನ ಸಮಿತಿ ಸಂಯುಕ್ತಾಶ್ರಯದಲ್ಲಿ ನಡೆದ ನಿರ್ಮಲ ತುಂಗಭದ್ರಾ ಅಭಿಯಾನ 3 ನೇ ಹಂತದ ಜಲಜಾಗೃತಿ ಜನಜಾಗ್ರತಿ ಪಾದಯಾತ್ರೆ ಕಾರ್ಯಕ್ರಮದ ವೇದಿಕೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ದೇಶದಲ್ಲಿನ 16 ಸಾವಿರ ನದಿಗಳಲ್ಲಿ 6 ಸಾವಿರ ನದಿಯ ಮೂಲ ಉಗಮ ಸ್ಥಾನಗಳು ನಿರಂತರ ಪರಿಸರದ ಮೇಲಿನ ಮಾನವರ ದಾಳಿ ಹಾಗೂ ಮಾಲಿನ್ಯದಿಂದಾಗಿ ಕಣ್ಮರೆಯಾಗಿವೆ ರಾಜ್ಯದಲ್ಲಿದ್ದ 36 ನೈಸರ್ಗಿಕ ಕೆರೆಗಳಲ್ಲಿಇಂದು ಕೇವಲ 3 ಸಾವಿರ ಕೆರೆಗಳು ಮಾತ್ರ ಉಳಿದುಕೊಂಡಿವೆ. ರಾಜ್ಯದಲ್ಲಿ ಹರಿಯುವ ಪ್ರಮುಖ ನದಿಗಳಾದ ತುಂಗಭದ್ರಾ, ಪಶ್ಚಿಮ ಘಟದಲ್ಲಿನ ಶೃಂಗೇರಿಯಿಂದ 15 ಕಿ.ಮೀ. ದೂರದ ವರಾಹ ಪರ್ವತದಲ್ಲಿನ ಗಂಗಡಿಯಲ್ಲಿ ಉಗಮವಾಗುತ್ತದೆ ಹಾಗೂ 718 ಕಿ.ಮೀ ಹರಿದು ಸಮುದ್ರವನ್ನು ಸೇರುತ್ತದೆ. ರಾಜ್ಯದಲ್ಲಿ 693 ಕಿ.ಮೀ. ತುಂಗಭದ್ರ ನದಿ ಹರಿಯುತ್ತದೆ. ಕೃಷ್ಣಾ ನದಿ 483 ಕಿ.ಮೀ, ಕಾವೇರಿ ನದಿ 320 ಕಿ.ಮೀ.ಹರಿಯುತ್ತದೆ ಎಂದರು.

ರಾಷ್ಟ್ರೀಯ ಸ್ವಾಭಿಮಾನ ಆಂದೋಲನ ಸಮಿತಿಯ ರಾಷ್ಟ್ರೀಯ ಅಧ್ಯಕ್ಷ ಬಸವರಾಜ್ ಪಾಟೀಲ್ ವೀರಾಪುರ ಮಾತನಾಡಿ ನಮ್ಮ ಸಂಸ್ಥೆಯು ದೇಶದಲ್ಲಿನ 80 ನದಿಗಳು ಅಪಾಯದಲ್ಲಿರುವುದನ್ನು ಗುರುತಿಸಿ ಅವುಗಳಲ್ಲಿ ಗಂಗೆ, ಯಮುನೆ, ಚಂಬಲ್ ಸೇರಿದಂತೆ ಇತರೆ ನದಿಗಳ ಸ್ವಚ್ಚತೆಗೆ ಕ್ರಮ ಕೈಗೊಳ್ಳಲಾಗಿದೆ ನಮ್ಮ ದೇಶದ ನದಿಗಳಿಗೆ ತನ್ನದೆ ಆದ ಇತಿಹಾಸ ಪಾವಿತ್ರ್ಯತೆ ಹರಿಯುವ ಮಾರ್ಗ ಮತ್ತು ಸಮುದ್ರವನ್ನು ಸೇರುವ ಸಂಗನ ಸ್ಥಳವಿರುತ್ತದೆ ಅದ್ದರಿಂದ ನದಿಗಳ ಮಾರ್ಗ ಬದಲಾವಣೆ ಹಾಗೂ ನದಿಗಳ ಜೋಡಣೆ ಮಾಡುವುದರಿಂದ ನದಿಗಳ ಅಸ್ತಿತ್ವಕ್ಕೆ ಧಕ್ಕೆ ಉಂಟಾಗುವುದರಿಂದ ಮಾಜಿಪ್ರಧಾನಿ ಅಟಲ್ ಬಿಹಾರಿ ವಾಜಪೇಯಿಯವರಿಗೆ ನಮ್ಮ ಸಂಸ್ಥೆವತಿಯಿಂದ ವರದಿಯನ್ನು ನೀಡಿದರಿಂದ ನದಿ ಜೊಡಣೆಯನ್ನು ಬಿಟ್ಟು ಪ್ರವಾಹ ಸಮಯದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ದೊರೆಯುವ ನೀರನ್ನು ಹರಸಿಕೊಳ್ಳುವುದಕ್ಕೆ ಪೈಪಲೈನ್ ಅಳವಡಿಸುವ ಯೋಜನೆಯನ್ನು ರೂಪಿಸಲಾಯಿತು. ನಮ್ಮ ದೇಶದ ಮೂಲವೇ ಧರ್ಮವಾಗಿದ್ದು .ಧರ್ಮದ ಆದಾರದ ಮೇಲೆ ಸಮಾಜ, ಸಮಾಜದ ಅಧಾರದ ಮೇಲೆ ಸರ್ಕಾರ ನಡೆಯುತ್ತದೆ. ನಮ್ಮ ಭಾರತದ ಸಂಸ್ಕೃತಿಯಲ್ಲಿ ನದಿಗಳಿಗೆ ಮಾತೃಸ್ಥಾನವನ್ನು ನೀಡಲಾಗಿದ್ದು ಅವುಗಳನ್ನು ಮುಂದಿನ ಪಿಳಿಗೆಗೆ ಉಳಿಸಿಕೊಳ್ಳುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ಹೇಳಿದರು.


ಸಾನಿಧ್ಯವನ್ನು ಉಟಕನೂರು ಮಠದ ಶ್ರೀಮರಿಬಸವಲಿಂಗ ದೇಶಿಕೇಂದ್ರ ಮಹಾಸ್ವಾಮಿ, ಅಡವಿ ಅಮರೇಶ್ವರ ಮಠದ ಶ್ರೀತೋಂಟಾದಾರ್ಯ ಮಹಾಸ್ವಾಮಿಗಳು ವಹಿಸಿದ್ದರು.

ಪ್ರೊ.ಶ್ರೀಪತಿ ಐ.ಐ.ಟಿ. ಹಾಗೂ ಆರ್ಥಿಕ ಸಲಹೆಗಾರರಾದ ಪ್ರೊ.ಕುಮಾರಸ್ವಾಮಿ ನದಿಯ ಉಳಿವಿನ ಕುರಿತು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಉಪನ್ಯಾಸ ನೀಡಿದರು.

ಈ ಕಾರ್ಯಕ್ರಮದಲ್ಲಿ ಮಾಜಿ ಸಂಸದ ಬಿ.ವಿ.ನಾಯಕ, ಮಾಜಿ ಶಾಸಕ ಬಸವನಗೌಡ ಬ್ಯಾಗವಾಟ್, ರಾಜಾವೆಂಕಟಪ್ಪನಾಯಕ, ಗಂಗಾಧರನಾಯಕ, ಕೃಷಿ ಬೆಲೆ ಅಯೋಗದ ಮಾಜಿ ಅಧ್ಯಕ್ಷ ಹನುಮನಗೌಡ ಬೆಳಗುರ್ಕಿ, ಜಿಲ್ಲಾ ಸಂಚಾಲಕ ಎನ್. ಉದಯಕುಮಾರ ಸಾಹುಕಾರ, ತಾ.ಸಂಚಾಲಕ ಶ್ರೀಧರಸ್ವಾಮಿ, ಕೊಟ್ರೇಶಪ್ಪ ಕೋರಿ, ಎಂ.ಮಲ್ಲಿಕಾರ್ಜುನಗೌಡ ಪೋತ್ನಾಳ, ಕೆ.ಎಸ್.ಕುಮಾರಸ್ವಾಮಿ ಪೋತ್ನಾಳ, ಹೆಚ್.ಶರ್ಪುದ್ದೀನ್ ಪೋತ್ನಾಳ, ಅನಿತಾ ನವಲಕಲ್, ಡಾ.ಬಸವರಾಜಪ್ಪ ಪೋತ್ನಾಳ್, ಶರಣಪ್ಪಗೌಡ ನಕ್ಕುಂದಿ, ವಿರೂಪಾಕ್ಷಿಗೌಡ ಪೋತ್ನಾಳ, ಶಿವಕುಮಾರ ಮಾಲಿಪಾಟೀಲ್, ಸುಜಾತ, ಅರುಣ್ ಚಂದಾ, ಹರಿಹರ ಪಾಟೀಲ್, ಜಗದೀಶ್ ಓತೂರು, ಮಲ್ಲಿಕಾರ್ಜುನಗೌಡ ಗಣೇಕಲ್, ವಿರೂಪಾಕ್ಷಪ್ಪ ನುಗಡೋಣಿ ಸೇರಿದಂತೆ ಪೋತ್ನಾಳ್ ಗ್ರಾಮದ ಅನೇಕ ಮುಖಂಡರು, ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು, ಗ್ರಾಮಸ್ಥರು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಭಾಗವಹಿಸಿದ್ದರು.

ಪೋತ್ನಾಳ್ ಗ್ರಾಮದಿಂದ ಹಿರೇಕೊಟ್ನಕಲ್ ವರೆಗೆ ನಡೆದ ನಿರ್ಮಲ ತುಂಗಭದ್ರಾ ಅಭಿಯಾನ ಜಲಜಾಗೃತಿ ಜನಜಾಗೃತಿ ಪಾದಯಾತ್ರೆಯಲ್ಲಿ ನೂರಾರು ಜನರು ಭಾಗವಹಿಸಿದ್ದರು.

ವಿದ್ಯುತ್ ಗೋಪುರ ಸ್ಥಳಾಂತರಕ್ಕೆ ಆಗ್ರಹ



ಹರಪನಹಳ್ಳಿ,ಜ.01-

ತಾಲ್ಲೂಕಿನ ಕಣಿವಿಹಳ್ಳಿ ಗ್ರಾಮದಲ್ಲಿನ 220 ಕೆ.ವಿ. ಒಂಟಿ ವಿದ್ಯುತ್ ಗೋಪುರವನ್ನು ಸ್ಥಳಾಂತರಿಸಬೇಕು ಹಾಗೂ ಹೊಸ ಗೋಪುರ ನಿರ್ಮಾಣಕ್ಕೆ ಅವಕಾಶ ಕೊಡಬಾರದು ಎಂದು ಆಗ್ರಹಿಸಿ ಗ್ರಾಮಸ್ಥರು ಬುಧವಾರ ತಹಶೀಲ್ದಾರ್ ಬಿ.ವಿ. ಗಿರೀಶ್ ಬಾಬು ಅವರಿಗೆ ಒತ್ತಾಯಿಸಿದರು.

ಮುಖಂಡ ಕಣಿವಿಹಳ್ಳಿ ಮಂಜುನಾಥ ಮಾತನಾಡಿ, ಕಣಿವಿಹಳ್ಳಿಯಲ್ಲಿ ಪರಿಶಿಷ್ಟ ಸಮುದಾಯದ 60ಕ್ಕೂ ಹೆಚ್ಚು ಕುಟುಂಬಗಳು ವಾಸವಾಗಿವೆ. 1978ರಲ್ಲಿ ಕೊಪ್ಪಳದ ಲಿಂಗಾಪುರದಿಂದ ಹರಿಹರದ ಗುತ್ತೂರು ವಿದ್ಯುತ್ ಸ್ವೀಕರಣ ಕೇಂದ್ರಕ್ಕೆ 220 ಕೆ.ವಿ. ಹೈ ವೋಲ್ಟೇಜ್ ವಿದ್ಯುತ್ ತಂತಿ ಅಳವಡಿಸ ಲಾಗಿದೆ. ಆದರೆ ನಮ್ಮ ಗ್ರಾಮದಲ್ಲಿ 1 ಎಕರೆ 57 ಸೆಂಟ್ಸ್ ಭೂಮಿಯನ್ನು ಖಾಸಗಿಯವರಿಂದ ಸರ್ಕಾರವು ಸ್ವಾಧೀನಪಡಿಸಿಕೊಂಡು, ನಮ್ಮ ಕಾಲೊನಿಯ 60 ದಲಿತ ಕುಟುಂಬಗಳಿಗೆ ಮನೆ ಕಟ್ಟಿಕೊಳ್ಳಲು ಹಕ್ಕುಪತ್ರ ಕೊಟ್ಟಿದೆ ಎಂದರು.

ಇದನ್ನು ಲೆಕ್ಕಿಸದ ಕೆಪಿಟಿಸಿಎಲ್ ಅಧಿಕಾರಿಗಳು ಭೂ ಪರಿವರ್ತನೆ ಮಾಡಿಕೊಂಡು, ಅಲ್ಲಿ ವಾಸ ಮಾಡುತ್ತಿರುವ ದಲಿತ ಕುಟುಂಬಗಳನ್ನು ಒಕ್ಕಲೆಬ್ಬಿಸಲು ಹೊರಟಿದ್ದಾರೆ. ಹೈ ವೋಲ್ಟೇಜ್ ವಿದ್ಯುತ್ ಪ್ರಸಾರದ ಪರಿಣಾಮ ಮನೆಯ ಟಿ.ವಿ., ಬಲ್ಬ್‌ಗಳು ಸುಟ್ಟು ಹೋಗುತ್ತಿವೆ ಎಂದು ಆರೋಪಿಸಿದರು.

ಪ್ರಕರಣ ನ್ಯಾಯಾಲಯದಲ್ಲಿದೆ, ಆದರೂ ಅಧಿಕಾರಿಗಳು ಆದೇಶಕ್ಕೂ ಮುನ್ನವೇ ಕಾಮಗಾರಿ ಮಾಡಲು ಹೊರಟಿರುವುದನ್ನು ನಿಲ್ಲಿಸಬೇಕು. ಈ ಬಗ್ಗೆ ಜಾರಿ ನಿರ್ದೇಶನಾಲಯ, ಮಾನವ ಹಕ್ಕುಗಳ ಆಯೋಗ, ರಾಜ್ಯ ಅನುಸೂಚಿತ ಜಾತಿ, ಅನುಸೂಚಿತ ಬುಡಕಟ್ಟು ಆಯೋಗಕ್ಕೂ ದೂರು ಸಲ್ಲಿಸಲಾಗಿದೆ. ವಿದ್ಯುತ್ ಗೋಪುರಗಳನ್ನು ಬೇರೆಡೆ ಸ್ಥಳಾಂತರಿಸುವ ತನಕ ಕಾನೂನು ಹೋರಾಟ ನಿಲ್ಲುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ಇಟ್ಟಿಗಿ ಸುಮಾ, ಹುಚ್ಚಪ್ಪ, ಕಾಳಪ್ಪ, ಹನುಮಪ್ಪ, ಗೋಣಿಸ್ವಾಮಿ, ಮಲ್ಲಿಕಾರ್ಜುನ, ಜುಂಜಪ್ಪ, ಅನ್ನಪೂರ್ಣ, ಎಸ್.ಕವಿತಾ, ನಾಗರಾಜ್, ಮಮತ, ಶ್ರವಣಕುಮಾರ, ಹನುಮಂತಪ್ಪ, ಎಸ್.ನಿಂಗಪ್ಪ, ಮಂಜುನಾಥ, ಯರಿಯಮ್ಮ ಇದ್ದರು.

ಹೊಸ ವರ್ಷದ ಸಂಭ್ರಮಾಚರಣೆ ವೇಳೆ ಸ್ವಿಸ್‌ನ ಐಷಾರಾಮಿ ಬಾರ್‌ನಲ್ಲಿ ಬೆಂಕಿ ಅವಘಡ: 40 ಮಂದಿ ಸಾವು



ನ್ಸ್ ಮಾಂಟಾನಾ(ಸ್ವಿಟ್ಜರ್ಲ್ಯಾಂಡ್) : ಸ್ವಿಸ್‌ನ ಕ್ರಾನ್ಸ್-ಮಾಂಟಾನಾದಲ್ಲಿನ ಐಷಾರಾಮಿ ಬಾರ್‌ವೊಂದರಲ್ಲಿ ಹೊಸ ವರ್ಷದ ಸಂಭ್ರಮಾಚರಣೆಯ ಸಮಯದಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, 40 ಜನರು ಸಾವನ್ನಪ್ಪಿದ್ದಾರೆ ಹಾಗೂ ಹಲವರು ಗಾಯಗೊಂಡಿದ್ದಾರೆ ಎಂದು ಪೊಲೀಸರು ಗುರುವಾರ ಮುಂಜಾನೆ ತಿಳಿಸಿದ್ದಾರೆ.

ಯುರೋಪ್‌ನ ಅಗ್ರ ಶ್ರೇಯಾಂಕಿತ ಸ್ಕೀ ತಾಣಗಳಲ್ಲಿ ಒಂದಾದ ಜನಪ್ರಿಯ ರೆಸಾರ್ಟ್‌ಗೆ ಪೊಲೀಸರು, ಅಗ್ನಿಶಾಮಕ ದಳ ಮತ್ತು ರಕ್ಷಣಾ ಕಾರ್ಯಕರ್ತರು ಧಾವಿಸಿ ಪರಿಶೀಲಿಸಿದ್ದಾರೆ ಎಂದು ಸ್ವಿಸ್‌ನ ಮಾಧ್ಯಮವೊಂದು ವರದಿ ಮಾಡಿದೆ.

ಬಾರ್‌ನಲ್ಲಿ ಸಂಭವಿಸಿರುವ ಅಗ್ನಿ ಅವಘಡಕ್ಕೆ ನಿಖರ ಕಾರಣ ತಿಳಿದುಬಂದಿಲ್ಲ ಎಂದು ನೈಋತ್ಯ ಸ್ವಿಟ್ಜರ್ಲ್ಯಾಂಡ್‌ನ ವಾಲಿಸ್ ಕ್ಯಾಂಟನ್‌ನಲ್ಲಿರುವ ಪೊಲೀಸರು ತಿಳಿಸಿದ್ದಾರೆ.

ಹೊಸ ವರ್ಷದ ಆಚರಣೆಗಾಗಿ ಸುಮಾರು 100 ಜನರು ಅಲ್ಲಿ ಸೇರಿದ್ದರು ಎಂದು ವಕ್ತಾರರು ತಿಳಿಸಿದ್ದಾರೆ. ನ್ಯೂಯಾರ್ಕ್‌ನ ಪ್ರವಾಸಿಗರೊಬ್ಬರು, ಬಾರ್‌ನಲ್ಲಿ ಪ್ರಕಾಶಮಾನವಾದ ಕಿತ್ತಳೆ ಬಣ್ಣದ ಜ್ವಾಲೆಗಳು ಬರುತ್ತಿರುವುದನ್ನು ಚಿತ್ರೀಕರಿಸಿದ್ದಾರೆ. ಅಲ್ಲದೇ, ಕತ್ತಲೆಯಲ್ಲಿ ಜನರು ಓಡಿಹೋಗುವುದನ್ನು ಮತ್ತು ಕಿರುಚುತ್ತಿರುವುದನ್ನು ನೋಡಿದೆ ಎಂದು ತಿಳಿಸಿದ್ದಾರೆ.

'ಹಲವಾರು ಜನರು ಪ್ರಾಣ ಕಳೆದುಕೊಂಡಿದ್ದಾರೆ ಹಾಗೂ ಇತರರು ಗಾಯಗೊಂಡಿದ್ದಾರೆ. ಪ್ರಮುಖ ತುರ್ತು ಕ್ರಮ ಕೈಗೊಳ್ಳಲಾ ಗುತ್ತಿದೆ' ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

'ಘಟನಾ ಸ್ಥಳಕ್ಕೆ ಪೊಲೀಸರು, ಅಗ್ನಿಶಾಮಕ ದಳ ಮತ್ತು ರಕ್ಷಣಾ ಕಾರ್ಯಕರ್ತರು ತಕ್ಷಣವೇ ಧಾವಿಸಿ ಹಲವಾರು ಸಂತ್ರಸ್ತರಿಗೆ ಸಹಾಯ ಮಾಡಿದರು. ಗಂಟೆಗಳ ನಂತರವೂ ಬಾರ್ ಹೊರಗೆ ಆಂಬ್ಯುಲೆನ್ಸ್ ಗಳು ನಿಂತಿದ್ದವು ಹಾಗೂ ಬಾರ್‌ನ ಕಿಟಕಿಗಳು ಒಡೆದಿರುವುದು ಕಾಣುತ್ತಿತ್ತು' ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ.

'ಘಟನಾ ಸ್ಥಳದಲ್ಲಿದ್ದ ವೈದ್ಯರನ್ನು ಉಲ್ಲೇಖಿಸಿ, ಸಾವಿನ ಸಂಖ್ಯೆ 'ಡಜನ್‌ಗಟ್ಟಲೆ' ಇರಬಹುದು ಎಂದು ಸ್ವಿಸ್ ದಿನಪತ್ರಿಕೆ ಬ್ಲಿಕ್ ವರದಿ ಮಾಡಿದೆ.

'ಅವಗಢದಿಂದ ಸುಮಾರು 40 ಜನರು ಸಾವನ್ನಪ್ಪಿದ್ದು ಮತ್ತು 100 ಜನರು ಗಾಯಗೊಂಡಿದ್ದಾರೆ' ಪ್ರಾದೇ ಶಿಕ ದಿನಪತ್ರಿಕೆ ಲೆ ನೌವೆಲಿಸ್ಟೆ ತಿಳಿಸಿದೆ.

ಸಂಗೀತ ಕಚೇರಿಯ ಸಮಯದಲ್ಲಿ ಪೈರೋಟೆಕ್ನಿಕ್‌ಗಳನ್ನು ಬಳಸಿದ್ದರಿಂದಾಗಿ ಬೆಂಕಿ ಕಾಣಿಸಿಕೊಂಡಿರಬಹುದು ಎಂದು ಸ್ವಿಸ್ ಮಾಧ್ಯಮಗಳು ವರದಿ ಮಾಡಿವೆ. ಆದರೆ, ಪೊಲೀಸರು ಕಾರಣ ತಿಳಿದಿಲ್ಲ ಎಂದು ಹೇಳಿದ್ದಾರೆ.

ಲೆ ಕಾನ್ಸ್ಟೆಲೇಷನ್‌ನಲ್ಲಿ ಮಧ್ಯರಾತ್ರಿ 1:30 ರ ಸುಮಾರಿಗೆ (0030) ಅಪರಿಚಿತ ಮೂಲದ ಸ್ಫೋಟ ಸಂಭವಿಸಿದೆ ಎಂದು ಪೊಲೀಸ್ ವಕ್ತಾರ ಗೇಟನ್ ಲಾಥಿಯಾನ್ ಅವರು ಎಎಫ್‌ಪಿ ಮಾಧ್ಯಮಕ್ಕೆ ತಿಳಿಸಿದ್ದಾರೆ.

ಆ ಪ್ರದೇಶಗಳು 'ಸಾರ್ವಜನಿಕರಿಗೆ ಸಂಪೂರ್ಣವಾಗಿ ಮುಚ್ಚಲ್ಪಟ್ಟಿವೆ' ಮತ್ತು 'ಕ್ರಾನ್ಸ್ ಮೊಂಟಾನಾದ ಮೇಲೆ ಹಾರಾಟವನ್ನು ನಿಷೇಧಿಸಲಾಗಿದೆ' ಎಂದು ಪೊಲೀಸರು ತಿಳಿಸಿದ್ದಾರೆ.

'ಪಾರ್ಟಿ ಜೋರಾಗಿ ನಡೆಯುತ್ತಿತ್ತು.. ಸಂಗೀತ ಮತ್ತು ಷಾಂಪೇನ್ ಮುಕ್ತವಾಗಿ ಕೇಳಿಬರುತ್ತಿತ್ತು. ಆದರೆ, ಬೆಂಕಿಯ ಸುದ್ದಿ ಬರುತ್ತಿದ್ದಂತೆ, ನಿರಾತಂಕದ ಮನಸ್ಥಿತಿ ಮಾಯವಾಯಿತು. ಜನರು ಬೀದಿಯಲ್ಲಿ ಸೇರಲು ಪ್ರಾರಂಭಿಸಿದರು. ದೂರದಲ್ಲಿ ನಮಗೆ ಸೈರನ್‌ಗಳು ಕೇಳಿಸುತ್ತಿದ್ದವು. ನನ್ನ ಸುತ್ತಲೂ ಜನರು ದಿಗ್ಭ್ರಮೆಗೊಂಡರು, ಚಿಂತಿತರಾಗಿದ್ದರು, ಮೌನವಾಗಿದ್ದರು' ಎಂದು ಹತ್ತಿರದಲ್ಲಿ ವಾಸಿಸುತ್ತಿದ್ದ ನಿವಾಸಿಯೊಬ್ಬರು ಲೌಸಾನ್ನೆ ಪತ್ರಿಕೆಗೆ ತಿಳಿಸಿದ್ದಾರೆ.

ನೆರಳಿನಿಂದ ಜಾಗತಿಕ ಬೆಳಕಿನತ್ತ: ಭಾರತೀಯ ಮಹಿಳಾ ಕ್ರಿಕೆಟ್‌ನ ಸುವರ್ಣ ಯುಗ



ದಶಕಗಳ ಕನಸು, ಸೋಲಿನ ಕಹಿ ನೆನಪುಗಳು, ಫೈನಲ್‌ನಲ್ಲಿ ಎಡವಿದ್ದ ನೋವು ಇವೆಲ್ಲದಕ್ಕೂ 2025ರ ವರ್ಷಾಂತ್ಯದಲ್ಲಿ ಮುಲಾಮು ಸಿಕ್ಕಿದೆ. ಇಷ್ಟು ದಿನ ''ಬಲಿಷ್ಠ ತಂಡ, ಆದರೆ ಕಪ್ ಗೆಲ್ಲಲ್ಲ ಎಂಬ ಅಪವಾದವನ್ನು ಹೊತ್ತಿದ್ದ ಭಾರತೀಯ ಮಹಿಳಾ ಕ್ರಿಕೆಟ್ ತಂಡ, ಈ ಬಾರಿ ಟಿ20 ವಿಶ್ವಕಪ್ ಎತ್ತಿ ಹಿಡಿಯುವ ಮೂಲಕ ಹೊಸ ಇತಿಹಾಸ ಬರೆದಿದೆ.

ಆಧುನಿಕ ಸಮಾಜದಲ್ಲಿ ಮಹಿಳಾ ಕ್ರಿಕೆಟ್ ಕೇವಲ ಆಟವಾಗಿ ಉಳಿದಿಲ್ಲ; ಅದು ಬದಲಾವಣೆಯ ಸಂಕೇತವಾಗಿದೆ. 2025ರ ವರ್ಷವು ಭಾರತೀಯ ಕ್ರೀಡಾ ಇತಿಹಾಸದಲ್ಲಿ ಸುವರ್ಣಾಕ್ಷರಗಳಲ್ಲಿ ಬರೆದಿಡುವಂತಹ ವರ್ಷ.

ವಿಶ್ವಕಪ್ ಗೆಲುವು: ಚೋಕರ್ಸ್ ಹಣೆಪಟ್ಟಿ ಕಳಚಿದ ಕ್ಷಣ

2025ರ ಐಸಿಸಿ ಮಹಿಳಾ ಟಿ20 ವಿಶ್ವಕಪ್ ಟೂರ್ನಿಯು ಭಾರತೀಯ ಪಾಲಿಗೆ ಒಂದು ರೋಚಕ ಪಯಣವಾಗಿತ್ತು. ಈ ಹಿಂದಿನ ಆವೃತ್ತಿಗಳಲ್ಲಿ (2020ರ ಟಿ20 ವಿಶ್ವಕಪ್ ಫೈನಲ್, 2017ರ ಏಕದಿನ ವಿಶ್ವಕಪ್ ಫೈನಲ್) ಗೆಲ್ಲುವ ಹಂತಕ್ಕೆ ಬಂದು ಸೋತಿದ್ದ ಭಾರತ, ಈ ಬಾರಿ ಹಳೆಯ ತಪ್ಪುಗಳನ್ನು ಮರುಕಳಿಸಿದಂತೆ ಎಚ್ಚರವಹಿಸಿತು.

ಫೈನಲ್ ಪಂದ್ಯದಲ್ಲಿ ಸಾಂಪ್ರದಾಯಿಕ ಎದುರಾಳಿ, ಕ್ರಿಕೆಟ್ ಜಗತ್ತಿನ ದೈತ್ಯ ತಂಡ ಆಸ್ಟ್ರೇಲಿಯಾವನ್ನು ಮಣಿಸಿದ್ದು ಸಾಮಾನ್ಯ ಸಾಧನೆಯಲ್ಲ. ನಾಯಕಿ ಹರ್ಮನ್‌ಪ್ರೀತ್ ಕೌರ್ ಅವರ ನಾಯಕತ್ವ ಮತ್ತು ಒತ್ತಡದ ಸಂದರ್ಭದಲ್ಲಿ ಸ್ಮೃತಿ ಮಂಧಾನ ನೀಡಿದ ಭದ್ರ ಬುನಾದಿ ತಂಡದ ಗೆಲುವಿಗೆ ಕಾರಣವಾಯಿತು. ಬೌಲಿಂಗ್‌ನಲ್ಲಿ ರೇಣುಕಾ ಸಿಂಗ್ ಠಾಕೂರ್ ಅವರ ಸ್ವಿಂಗ್ ಮತ್ತು ದೀಪ್ತಿ ಶರ್ಮಾ ಅವರ ಸ್ಪಿನ್ ಮೋಡಿ ಎದುರಾಳಿಗಳನ್ನು ಕಟ್ಟಿಹಾಕಿತು. ''ನಾವು ಕೇವಲ ಫೈನಲ್ ತಲುಪಲು ಬಂದಿಲ್ಲ, ಕಪ್ ಗೆಲ್ಲಲು ಬಂದಿದ್ದೇವೆ'' ಎಂದು ಟೂರ್ನಿಗೂ ಮುನ್ನ ನಾಯಕಿ ಹೇಳಿದ್ದ ಮಾತು ಅಕ್ಷರಶಃ ಸತ್ಯವಾಯಿತು. ಈ ಗೆಲುವು ಭಾರತದ ಮೂಲೆ ಮೂಲೆಗಳಿಂದ ಬಾಲಕಿಯರಿಗೆ ''ನಾವು ಜಗತ್ತನ್ನು ಗೆಲ್ಲಬಲ್ಲೆವು'' ಎಂಬ ಆತ್ಮವಿಶ್ವಾಸವನ್ನು ತುಂಬಿದೆ.

ಶ್ರೀಲಂಕಾ ಸರಣಿ: ವಿಶ್ವಕಪ್‌ಗೆ ಮುನ್ನುಡಿ

ವಿಶ್ವಕಪ್ ನಂತರ ನಡೆದ ಇತ್ತೀಚಿಗೆ ನಡೆದ ಶ್ರೀಲಂಕಾ ವಿರುದ್ಧದ ಟಿ20 ಸರಣಿಯು ಭಾರತದ ಸಿದ್ಧತೆಗೆ ಸಾಕ್ಷಿಯಾಗಿದೆ. ಏಷ್ಯಾ ಕಪ್ ಫೈನಲ್‌ನಲ್ಲಿ ಶ್ರೀಲಂಕಾ ವಿರುದ್ಧ ಎದುರಾಗಿದ್ದ ಸೋಲಿಗೆ ಭಾರತೀಯ ವನಿತೆಯರು ಈ ಸರಣಿಯಲ್ಲಿ ಸೇಡು ತೀರಿಸಿಕೊಂಡರು. ಶ್ರೀಲಂಕಾದ ಸ್ಪಿನ್ ಸ್ನೇಹಿ ಪಿಚ್‌ಗಳಲ್ಲಿ ಭಾರತೀಯ ಬ್ಯಾಟರ್‌ಗಳು, ವಿಶೇಷವಾಗಿ ಶಫಾಲಿ ವರ್ಮಾ ಮತ್ತು ಜೆಮಿಮಾ ರಾಡ್ರಿಗಸ್ ತೋರಿದ ಪ್ರದರ್ಶನ ಗಮನಾರ್ಹವಾಗಿತ್ತು. ಸರಣಿಯನ್ನು ಕ್ಲೀನ್ ಸ್ವೀಪ್ ಮಾಡುವ ಮೂಲಕ ಭಾರತ, ತಾನು ವಿಶ್ವಕಪ್‌ಗೆ ಸಂಪೂರ್ಣ ಸಜ್ಜಾಗಿದೆ ಎಂಬ ಸಂದೇಶವನ್ನು ರವಾನಿಸಿತು. ಈ ಸರಣಿ ಜಯವು ತಂಡದ ಮೀಸಲು ಆಟಗಾರರ ಬಲ ಎಷ್ಟಿದೆ ಎಂಬುದನ್ನು ಸಾಬೀತುಪಡಿಸಿತು.

ಇತಿಹಾಸದ ಹಾದಿ: ಸ್ಕರ್ಟ್‌ನಿಂದ ವಿಶ್ವಕಪ್‌ವರೆಗೆ

ಈ ಗೆಲುವಿನ ಸಂಭ್ರಮದಲ್ಲಿ ನಾವು ಇದರ ಹಿಂದಿನ ಸುದೀರ್ಘ ಹೋರಾಟವನ್ನು ಮರೆಯುವಂತಿಲ್ಲ. ಮಹಿಳಾ ಕ್ರಿಕೆಟ್‌ನ ಇತಿಹಾಸ 18ನೇ ಶತಮಾನದಷ್ಟು ಹಳೆಯದು.1745ರಲ್ಲೇ ಇಂಗ್ಲೆಂಡ್‌ನಲ್ಲಿ ಮಹಿಳಾ ಕ್ರಿಕೆಟ್ ಪಂದ್ಯ ನಡೆದಿತ್ತು. ಅಂದು ಸ್ಕರ್ಟ್ ಧರಿಸಿ, ಮನರಂಜನೆಗಾಗಿ ಆಡುತ್ತಿದ್ದ ಮಹಿಳೆಯರು, ಇಂದು ಕ್ರೀಡಾ ಸಮವಸ್ತ್ರ ಧರಿಸಿ ದೇಶಕ್ಕಾಗಿ ಹೋರಾಡುತ್ತಿದ್ದಾರೆ.

ಭಾರತದಲ್ಲಿ ಮಹಿಳಾ ಕ್ರಿಕೆಟ್ ಅಂಬೆಗಾಲಿಡಲು 1973ರ ವರೆಗೆ ಕಾಯಬೇಕಾಯಿತು. ಅಂದು ವಿಮೆನ್ಸ್ ಕ್ರಿಕೆಟ್ ಅಸೋಸಿಯೇಷನ್ ಆಫ್ ಇಂಡಿಯಾ() ಸ್ಥಾಪನೆಯಾಯಿತು. 1978ರಲ್ಲಿ ಭಾರತ ಮೊದಲ ಬಾರಿಗೆ ಮಹಿಳಾ ವಿಶ್ವಕಪ್ ಆಯೋಜಿಸಿತು. ಅಂದು ಆಟಗಾರ್ತಿಯರಿಗೆ ಇಂದಿನಂತೆ ಸೌಲಭ್ಯಗಳಿರಲಿಲ್ಲ. ಸ್ವಂತ ಖರ್ಚಿನಲ್ಲಿ ಪ್ರಯಾಣ, ಸಾಮಾನ್ಯ ಮೈದಾನಗಳು ಮತ್ತು ಸಮಾಜದ ಟೀಕೆಗಳನ್ನು ಎದುರಿಸಿ ಅವರು ಆಡಬೇಕಿತ್ತು.

ಕರ್ನಾಟಕದ ಕುವರಿ ಶಾಂತಾ ರಂಗಸ್ವಾಮಿ ಅಡಿಪಾಯದ ಶಿಲ್ಪಿ

ಭಾರತೀಯ ಮಹಿಳಾ ಕ್ರಿಕೆಟ್‌ನ ಈ ಯಶಸ್ಸಿನ ಸೌಧ ನಿಂತಿರುವುದು ಶಾಂತಾ ರಂಗಸ್ವಾಮಿ ಅವರಂತಹ ಹಿರಿಯರು ಹಾಕಿದ ಭದ್ರ ಬುನಾದಿಯ ಮೇಲೆ. ಕನ್ನಡಿಗರ ಹೆಮ್ಮೆಯಾದ ಶಾಂತಾ ಅವರು ಭಾರತ ತಂಡದ ಮೊದಲ ನಾಯಕಿಯಾಗಿ ಆಲ್‌ರೌಂಡರ್ ಆಗಿ ಸಲ್ಲಿಸಿದ ಸೇವೆ ಅಪಾರ. 1976ರಲ್ಲಿ ವೆಸ್ಟ್ ಇಂಡೀಸ್ ವಿರುದ್ಧ ಭಾರತಕ್ಕೆ ಮೊದಲ ಟೆಸ್ಟ್ ಗೆಲುವು ತಂದುಕೊಟ್ಟಿದ್ದು ಮತ್ತು ನ್ಯೂಜಿಲೆಂಡ್ ವಿರುದ್ಧ ಚೊಚ್ಚಲ ಶತಕ(108) ಬಾರಿಸಿದ್ದು ಇಂದಿಗೂ ದಾಖಲೆ. ಅಂದು ಶಾಂತಾ ಅವರು ಹಾಕಿಕೊಟ್ಟ ಹಾದಿಯಲ್ಲಿ ಇಂದು ಹರ್ಮನ್‌ಪ್ರೀತ್ ಕೌರ್ ವಿಶ್ವಕಪ್ ಎತ್ತಿ ಹಿಡಿದಿದ್ದಾರೆ.

ಬಿಸಿಸಿಐ ಮತ್ತು ಸಮಾನತೆಯ ಕ್ರಾಂತಿ

2006ರಲ್ಲಿ ಬಿಸಿಸಿಐ () ಮಹಿಳಾ ಕ್ರಿಕೆಟ್ ಅನ್ನು ತನ್ನ ತೆಕ್ಕೆಗೆ ತೆಗೆದುಕೊಂಡದ್ದು ಒಂದು ಮಹತ್ವದ ತಿರುವು. ಆದರೆ, ನಿಜವಾದ ಕ್ರಾಂತಿ ನಡೆದಿದ್ದು 2022ರಲ್ಲಿ. ಬಿಸಿಸಿಐ ಪುರುಷ ಮತ್ತು ಮಹಿಳಾ ಕ್ರಿಕೆಟಿಗರಿಗೆ ಸಮಾನ ಪಂದ್ಯ ಸಂಭಾವನೆ ಘೋಷಿಸುವ ಮೂಲಕ ಲಿಂಗ ತಾರತಮ್ಯಕ್ಕೆ ಅಂತ್ಯ ಹಾಡಿತು.

ಮಹಿಳಾ ಪ್ರೀಮಿಯರ್ ಲೀಗ್ (): ಗೇಮ್ ಚೇಂಜರ್

ವಿಶ್ವಕಪ್ ಗೆಲುವಿನಲ್ಲಿ ಮಹಿಳಾ ಪ್ರೀಮಿಯರ್ ಲೀಗ್ () ಪಾತ್ರ ನಿರ್ಣಾಯಕವಾಗಿದೆ. 2023ರಲ್ಲಿ ಆರಂಭವಾದ ಈ ಲೀಗ್, ಭಾರತೀಯ ಯುವ ಆಟಗಾರ್ತಿಯರಿಗೆ ವಿದೇಶಿ ತಾರೆಯರೊಂದಿಗೆ ಆಡುವ ಅವಕಾಶ ನೀಡಿತು. ಒತ್ತಡದ ಸಂದರ್ಭಗಳನ್ನು ಹೇಗೆ ನಿಭಾಯಿಸಬೇಕು ಎಂಬುದನ್ನು ಶ್ರೇಯಾಂಕಾ ಪಾಟೀಲ್, ಸೈಕಾ ಇಶಾಕ್, ರಿಚಾ ಘೋಷ್ ಅವರಂತಹ ಆಟಗಾರ್ತಿಯರು ಮೂಲಕ ಕಲಿತರು. ವಿಶ್ವಕಪ್ ಫೈನಲ್‌ನಂತಹ ದೊಡ್ಡ ವೇದಿಕೆಯಲ್ಲಿ ಆಡುವಾಗ ಅವರಿಗೆ ಹಳೆಯ ಭಯ ಇರಲಿಲ್ಲ, ಏಕಂದರೆ ಅವರು ಈಗಾಗಲೇ ಲೀಗ್ ಕ್ರಿಕೆಟ್‌ನಲ್ಲಿ ಉತ್ತಮ ಆಟಗಾರ್ತಿಯರ ಎದುರು ಪಳಗಿದ್ದರು.

ನಾಯಕಿಯರು ಮತ್ತು ತಾರೆಯರು

ಹರ್ಮನ್‌ಪ್ರೀತ್ ಕೌ:ರ್ ಪಂಜಾಬ್‌ನ ಮೊಗಾ ಎಂಬ ಪುಟ್ಟ ಊರಿನಿಂದ ಬಂದು, ಇಂದು ವಿಶ್ವಕಪ್ ಗೆದ್ದ ನಾಯಕಿಯಾಗಿ ಹೊರಹೊಮ್ಮಿದ ಅವರ ಪಯಣ ಅದ್ಭುತ. ಅವರ ಆಕ್ರಮಣಕಾರಿ ಬ್ಯಾಟಿಂಗ್ ಮತ್ತು ನಾಯಕತ್ವ ಇಂಡಕ್ಕೆ ಆನೆಬಲ ನೀಡಿದೆ.

ಸ್ಮೃತಿ ಮಂಧಾನ: ಎಡಗೈ ಬ್ಯಾಟರ್ ಸ್ಮೃತಿ ಅವರ ಕ್ಲಾಸ್ ಮತ್ತು ಸ್ಥಿರತೆ ತಂಡದ ಆಸ್ತಿ ಶಫಾಲಿ ವರ್ಮಾ: ಹರೆಯದ ಹುಡುಗಿ ಶಫಾಲಿ, ಆರಂಭಿಕರಾಗಿ ನೀಡುವ ಸ್ಫೋಟಕ ಆಟ ಎದುರಾಳಿಗಳ ಎದೆಯಲ್ಲಿ ನಡುಕ ಹುಟ್ಟಿಸುತ್ತದೆ.


ಜೂಲನ್ ಮತ್ತು ಮಿಥಾಲಿ: ಇಂದು ತಂಡದಲ್ಲಿ ಇಲ್ಲವಾಗಿದ್ದರೂ, ಮಿಥಾಲಿ ರಾಜ್ ಮತ್ತು ಜೋಲನ್ ಗೋಸ್ವಾಮಿ ಅವರ ತ್ಯಾಗ ಮತ್ತು ಮಾರ್ಗದರ್ಶನ ಈ ಗೆಲುವಿನ ಹಿಂದಿನ ಅದೃಶ್ಯ ಶಕ್ತಿ.

ಭವಿಷ್ಯದ ದೃಷ್ಟಿಕೋನ ಮತ್ತು ಸವಾಲುಗಳು

ಗ್ರಾಮೀಣ ಭಾಗದಲ್ಲಿ ಇನ್ನೂ ಹೆಚ್ಚಿನ ಮೂಲಸೌಕರ್ಯಗಳ ಅಗತ್ಯವಿದೆ. ಶಾಲಾ ಮಟ್ಟದಲ್ಲಿ ಬಾಲಕಿಯರ ಕ್ರಿಕೆಟ್‌ಗೆ ಇನ್ನಷ್ಟು ಉತ್ತೇಜನ ಸಿಗಬೇಕಿದೆ. ಆದರೆ, ಈ ಗೆಲುವು ಖಂಡಿತವಾಗಿಯೂ ಬದಲಾವಣೆಯ ವೇಗವನ್ನು ಹೆಚ್ಚಿಸಲಿದೆ.

ವಿಶ್ವಕಪ್ ಗೆಲುವು ಎಲ್ಲವನ್ನೂ ಸರಿಪಡಿಸಿದೆ ಎಂದು ಭಾವಿಸುವಂತಿಲ್ಲ. ಶಾಲಾ ಮಟ್ಟದಲ್ಲಿ ಬಾಲಕಿಯರ ಕ್ರಿಕೆಟ್‌ಗೆ ಇನ್ನಷ್ಟು ಉತ್ತೇಜನ ಸಿಗಬೇಕಿದೆ. ಆದರೆ, ಈ ಗೆಲುವು ಖಂಡಿತವಾಗಿಯೂ ಬದಲಾವಣೆಯ ವೇಗವನ್ನು ಹೆಚ್ಚಿಸಲಿದೆ. ಒಂದು ಕಾಲದಲ್ಲಿ ಪುರುಷರ ಕ್ರಿಕೆಟ್‌ನ ನೆರಳಿನಲ್ಲಿ, ಪ್ರಚಾರವಿಲ್ಲದೆ, ಸೌಲಭ್ಯಗಳಿಲ್ಲದೆ ನಡೆಯುತ್ತಿದ್ದ ಮಹಿಳಾ ಕ್ರಿಕೆಟ್, ಇಂದು ಜಗಮಗಿಸುವ ಬೆಳಕಿನಲ್ಲಿ ನಿಂತಿದೆ. 2025ರ ಟಿ20 ವಿಶ್ವಕಪ್ ಗೆಲುವು ಮತ್ತು ಶ್ರೀಲಂಕಾ ಸರಣಿಯ ಜಯಗಳು ಕೇವಲ ಅಂಕಿಅಂಶಗಳಲ್ಲ. ಇವು ಭಾರತೀಯ ಮಹಿಳೆಯರ ಛಲ, ಹೋರಾಟ ಮತ್ತು ಸಾಮರ್ಥ್ಯದ ಪ್ರತೀಕ. ''ಇದು ನಮ್ಮ ಆಟ, ಇದು ನಮ್ಮ ಸಮಯ'' ಎಂದು ಭಾರತದ ನಾರಿಯರು ಘಂಟಾಘೋಷವಾಗಿ ಸಾರಿದ್ದಾರೆ. ಭಾರತೀಯ ಮಹಿಳಾ ಕ್ರಿಕೆಟ್ ಈ ಅಮೃತ ಕಾಲ ಮುಂದಿನ ಪೀಳಿಗೆಗೆ ಸ್ಫೂರ್ತಿಯಾಗಲಿ.

ಸಿರುಗುಪ್ಪ ತಾಲೂಕ ಕಛೇರಿಯಲ್ಲಿ ಅಮರಶಿಲ್ಪಿ ಜಕಣಾಚಾರಿ ಅವರ ಸಂಸ್ಮರಣೆ



ಸಿರುಗುಪ್ಪ - ಕರ್ನಾಟಕ ಸರ್ಕಾರ ತಾಲೂಕ ಆಡಳಿತ ತಾಲೂಕ ಪಂಚಾಯತ್ ನಗರ ಸಭೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಎಲ್ಲಾ ಇಲಾಖೆಗಳ ಸಹಭಾಗಿತ್ವದಲ್ಲಿ ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿ ಅವರ ಸಂಸ್ಮರಣೆ ತಾಲೂಕ ತಹಶೀಲ್ದಾರ್ ಗೌಸಿಯ ಬೇಗಂ ನೇತೃತ್ವದಲ್ಲಿ ಉಪ ತಹಸೀಲ್ದಾರ್ ಸಿದ್ದಾರ್ಥ್ ಕಾರಂಜಿ ಅವರು ಅಮರ ಶಿಲ್ಪಿ ಜಕಣಾಚಾರಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಪುಷ್ಪ ಸಮರ್ಪಿಸಿ ನಮನ ಗೌರವ ಸಲ್ಲಿಸಿದರು.

ರಾಷ್ಟ್ರೀಯ ಹಬ್ಬಗಳ ಆಚರಣ ಸಮಿತಿ ಶಾಂತಿ ಸಭೆ ಸದಸ್ಯರು ಸಮಾಜ ಸುಧಾರಕರು ಅಬ್ದುಲ್ ನಬಿ ಮಾತನಾಡಿ ಕಲ್ಯಾಣ ಚಾಲುಕ್ಯ ಹಾಗೂ ಹೊಯ್ಸಳ ಕಾಲದಲ್ಲಿ ಹೆಚ್ಚಾಗಿ ದೇಗುಲಗಳನ್ನು ನಿರ್ಮಿಸಿದ ಅಮರ ಶಿಲ್ಪಿ ಜಕಣಾಚಾರ್ಯ ತುಮಕೂರು ಬಳಿಯ ಕೈದಾಳದಲ್ಲಿ ಇವರು ಜನಿಸಿದರು. ಬೇಲೂರು ಚೆನ್ನಕೇಶವ ದೇವಾಲಯ ಮತ್ತು ಅಲ್ಲಿನ ದರ್ಪಣ ಸುಂದರಿ ಸೇರಿದಂತೆ ಅನೇಕ ದೇವಾಲಯಗಳ ನಿರ್ಮಾಣ ಮಾಡಿದರು. 2021ರಿಂದ ಜನವರಿ 1ರಂದು ಪ್ರತಿವರ್ಷ ಅಮರ ಶಿಲ್ಪಿ ಜಕಣಾಚಾರಿ ಅವರ ಸಾಧನ ಸ್ಮರಿಸಲಾಗುತ್ತಿದೆ ಎಂದು ಕರೆನೀಡಿದರು.

ಸಾಮಾಜಿಕ ಕಾರ್ಯಕರ್ತ ಹಾಜಿ ಮೊಹಮ್ಮದ್ ಇಬ್ರಾಹಿಂ, ತಾಲೂಕು ಕಚೇರಿಯ ಶೇಖರ್ ಗಿರಿಯಪ್ಪ, ಲಕ್ಷ್ಮಮ್ಮ,ಹುಲಿಗೆಮ್ಮ,ಖಲೆಂದರ ಜಯಲಕ್ಷ್ಮಿ, ವಿಶ್ವಕರ್ಮ ಸಮೂದಯದ ಪದಾಧಿಕಾರಿಗಳು ಸಾರ್ವಜನಿಕರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಜೈಲಿಗೆ ಹೋಗಿ ಬಂದವರಿಗೆ ಸಂಭ್ರಮದ ಸ್ವಾಗತ; ಕರ್ನಾಟಕ ಹೀಗೇಕಾಯಿತು?



ಶಾಸಕರು, ಸಚಿವರು ಜೈಲಿಗೆ ಹೋಗಿ ಬರುವುದು; ಬಂದವರಿಗೆ ಸಂಭ್ರಮದ ಸ್ವಾಗತ ಸನ್ಮಾನ ಮಾಡುತ್ತಿರುವುದು ಸಾಮಾನ್ಯವಾಗಿದೆ. ತಪ್ಪು ಮಾಡುವುದು, ಮಾಡಿದ್ದನ್ನು ಸಮರ್ಥಿಸಿಕೊಳ್ಳುವುದು, ಮಾಡಿದ್ದಕ್ಕೆ ಸಂಭ್ರಮಿಸುವುದು ರಾಜಕೀಯ ನೈತಿಕತೆಯನ್ನು ಅಪವ್ಯಾಖ್ಯಾನಗೊಳಿಸುತ್ತಿದೆ.

ಆನ್‌ಲೈನ್-ಆಫ್‌ಲೈನ್ ಬೆಟ್ಟಿಂಗ್ ವ್ಯವಹಾರದಲ್ಲಿ ಅಕ್ರಮ ಹಣ ವರ್ಗಾವಣೆ ಆರೋಪದಡಿ ಜಾರಿ ನಿರ್ದೇಶನಾಲಯ(ಇಡಿ)ದಿಂದ ಬಂಧಿತರಾಗಿ, ಜೈಲಿನಲ್ಲಿದ್ದ ಶಾಸಕ ಕೆ.ಸಿ. ವೀರೇಂದ್ರ ಅವರಿಗೆ ಜನಪ್ರತಿನಿಧಿಗಳ ನ್ಯಾಯಾಲಯ ಷರತ್ತುಬದ್ಧ ಜಾಮೀನು ನೀಡಿದೆ.

ಕಳೆದ ನಾಲ್ಕು ತಿಂಗಳಿನಿಂದ ಪರಪ್ಪನ ಅಗ್ರಹಾರ ಜೈಲಿನಲ್ಲಿದ್ದ ಚಿತ್ರದುರ್ಗ ಕ್ಷೇತ್ರದ ಕಾಂಗ್ರೆಸ್ ಶಾಸಕ ವೀರೇಂದ್ರ ಅಲಿಯಾಸ್ ಪಪ್ಪಿ ಬಿಡುಗಡೆಯಾಗಿ ಹೊರಬಂದಿದ್ದಾರೆ. ಶಾಸಕ ವೀರೇಂದ್ರ ಜೈಲಿನಿಂದ ಹೊರಬರುತ್ತಿದ್ದಂತೆ, ಅವರ ಅಭಿಮಾನಿಗಳಿಂದ ಅದ್ದೂರಿ ಸ್ವಾಗತ ಸಿಕ್ಕಿದೆ. ಹಾರ ತುರಾಯಿ ಹಾಕಿ ಮೆರವಣಿಗೆ ಮಾಡಲಾಗಿದೆ. ಚಳ್ಳಕೆರೆಯಲ್ಲಿ ಅಭಿಮಾನಿಗಳು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದ್ದಾರೆ.

ಒಂದು ಕ್ಷೇತ್ರದ ಜನಪ್ರತಿನಿಧಿ ಎಂದಮೇಲೆ, ಅವರಿಗೆ ಪಕ್ಷದ ಕಾರ್ಯಕರ್ತರಿರುತ್ತಾರೆ, ಅಭಿಮಾನಿಗಳಿರುತ್ತಾರೆ, ಬೆಂಬಲಿಗರಿರುತ್ತಾರೆ. ಇದೆಲ್ಲವೂ ಈ ಕಾಲದ ರಾಜಕಾರಣದಲ್ಲಿ ಸಾಮಾನ್ಯ, ಇದರಲ್ಲೇನು ವಿಶೇಷ ಎಂದು ಕೇಳುವವರೂ ಇದ್ದಾರೆ. ಆದರೆ ಕರ್ನಾಟಕ ಕಂಡ ರಾಜಕಾರಣದಲ್ಲಿ, ಈ ಬೆಳವಣಿಗೆಯನ್ನು ಕಂಡವರಿಲ್ಲ. ಇದು ಕರ್ನಾಟಕದ ಸಂಸ್ಕೃತಿಯಲ್ಲ.

ಹಿಂದೊಮ್ಮೆ ಮಾಜಿ ಶಾಸಕ, ಕನ್ನಡಪರ ಹೋರಾಟಗಾರ ವಾಟಾಳ್ ನಾಗರಾಜ್ ಅವರು ಶಾಸಕರನ್ನು ಮತ್ತು ಶಾಸನಸಭೆಯನ್ನು ಬಣ್ಣಿಸಿದ್ದರು. ಕರ್ನಾಟಕ ಕಂಡ ರಾಜಕಾರಣ ಎಂಥದು ಎನ್ನುವುದನ್ನು ಕಣ್ಮುಂದೆ ಇರಿಸಿದ್ದರು. 70ರ ದಶಕದಲ್ಲಿ ವಿಧಾನಸೌಧ ದೇವಸ್ಥಾನದಂತಿತ್ತು. ಶಾಸನಸಭೆ ಪವಿತ್ರ ಸ್ಥಳವಾಗಿತ್ತು. ನಾಡಿನ ಜನರ ಕಲ್ಯಾಣಕ್ಕಾಗಿ ನಡೆಯುವ ಗಂಭೀರ ಚರ್ಚೆಗಳ ಕೇಂದ್ರವಾಗಿತ್ತು. ಅದರೊಳಕ್ಕೆ ಪ್ರವೇಶ ಪಡೆಯುವುದು ಪವಿತ್ರಕಾರ್ಯವಾಗಿತ್ತು. ಪ್ರವೇಶ ಪಡೆದ ಶಾಸಕರು ದೇವರಂತೆ ಕಾಣುತ್ತಿದ್ದರು. ಅವರ ಪರಿಶುದ್ಧತೆ, ಪ್ರಾಮಾಣಿಕತೆ, ಜನಪರ ಪ್ರೀತಿ, ಕಾಳಜಿ, ಕಳಕಳಿ ಪ್ರಶ್ನಾತೀತ. ಅವರ ತಿಳಿವಳಿಕೆ, ಅನುಭವ, ಬುದ್ಧಿವಂತಿಕೆಯೂ ಕೂಡ. ಅವರ ಆದರ್ಶ, ಜನಪರ ನಿಲುವುಗಳಿಂದಾಗಿ ಶಾಸನಸಭೆ ಪ್ರಜಾತಂತ್ರದ ಸ್ವರ್ಗದಂತಿತ್ತು. ಅಂತಹ ಕಾಲವನ್ನು, ಆ ಜನರನ್ನು ನೋಡಿ ಬೆಳೆದವನು ನಾನು ಎಂದು ಸ್ಮರಿಸಿದ್ದರು.

ಈಗ ಏನಾಗಿದೆ? ಕಾಲವೂ ಬದಲಾಗಿದೆ. ರಾಜಕಾರಣವೂ ಬದಲಾಗಿದೆ. ಬದಲಾದ ಕಾಲದಲ್ಲಿ, ಅಕ್ರಮವೆಸಗಿ ಜೈಲಿಗೆ ಹೋಗಿ ಬಂದ ರಾಜಕೀಯ ನಾಯಕರಿಗೆ ಅದ್ದೂರಿ ಸ್ವಾಗತ ನೀಡಿ, ಮೆರವಣಿಗೆ ಮಾಡಿ ಸಂಭ್ರಮಿಸುವುದು ಸಾಮಾನ್ಯವಾಗಿದೆ. ಈ ಮಾದರಿ ದೇಶದ ಇತರ ರಾಜ್ಯಗಳಲ್ಲಿ ಕಂಡುಬರುತ್ತಿತ್ತು. ಕರ್ನಾಟಕದಲ್ಲಿ ಇರಲಿಲ್ಲ. ಮುಖ್ಯಮಂತ್ರಿಯೊಬ್ಬ ಭ್ರಷ್ಟಾಚಾರದ ಆಪಾದನೆಯ ಮೇಲೆ ಜೈಲಿಗೆ ಹೋಗಿದ್ದನ್ನು ಕನ್ನಡಿಗರು ಕಂಡಿದ್ದಿಲ್ಲ. ಅದನ್ನು ಕರ್ನಾಟಕಕ್ಕೂ ಕರೆತಂದ ಕೀರ್ತಿ ಭಾರತೀಯ ಜನತಾ ಪಕ್ಷದ ಹಿರಿಯ ನಾಯಕ, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರಿಗೆ ಸಲ್ಲಬೇಕು. ಅದರಲ್ಲೂ ಸಮಾಜವನ್ನು ತಿದ್ದುವ, ಬುದ್ಧಿ ಹೇಳುವ ಮಠಾಧೀಶರು, ಸ್ವಾಮೀಜಿಗಳೇ ಮುಂದಾಗಿ, ಜಾತಿಕಾರಣಕ್ಕಾಗಿ ಯಡಿಯೂರಪ್ಪನವರ ಬೆನ್ನಿಗೆ ನಿಂತು, ಬೆಂಬಲಿಸಿದ್ದು- ಕರ್ನಾಟಕ ಕಂಡ ದುರಂತವೆಂದೇ ಹೇಳಬೇಕು.

ದುರಂತ ಏಕೆಂದರೆ, ಅಲ್ಲಿಯವರೆಗೆ ಸಾರ್ವಜನಿಕ ಬದುಕಿನಲ್ಲಿರುವವರು ಏನಾದರೂ ತಪ್ಪು ಮಾಡಿದರೆ, ಆ ತಕ್ಷಣವೇ ಪ್ರಶ್ನಿಸುವ, ಪ್ರತಿಭಟಿಸುವ ಜನರಿದ್ದರು. ಇತ್ತೀಚೆಗೆ ಆ ಪ್ರತಿರೋಧದ ಸಂಖ್ಯೆ ಕ್ಷೀಣಿಸುತ್ತಿದೆ. ಸಹಿಸಿಕೊಳ್ಳುವ ಸ್ವಭಾವ ನಿಧಾನವಾಗಿ ಮೈಗೂಡುತ್ತಿದೆ. ಸಾರ್ವಜನಿಕರಿಂದ ವಿರೋಧ ವ್ಯಕ್ತವಾಗದಿರುವುದು ಅಧಿಕಾರಸ್ಥ ರಾಜಕಾರಣಿಗಳಿಗೆ ಅಕ್ರಮಗಳಿಗೆ ಪರವಾನಗಿಯಂತೆ ಕಾಣತೊಡಗಿದೆ. ಅಲ್ಲಿಂದ ಆರಂಭವಾದ ಸಹಿಸಿಕೊಳ್ಳುವ ಸ್ವಭಾವ ಈಗ ಸಾರ್ವಜನಿಕ ಸಂಭ್ರಮವಾಗಿ ಬದಲಾಗಿದೆ.

ನಾಡಿನ ಭೂಮಿ ಬಗೆದು ಕಣ್ಣುಬಿಡುವುದರೊಳಗೆ ಕೋಟ್ಯಧಿಪತಿಯಾದ ಬಿಜೆಪಿಯ ಗಣಿ ಕುಳ ಜನಾರ್ದನ ರೆಡ್ಡಿ, ಜೈಲಿಗೆ ಹೋಗಿಬಂದರು. ಕಾಂಗ್ರೆಸ್ ಮುಖಂಡ, ಪ್ರಸ್ತುತ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಅಕ್ರಮ ಹಣ ವರ್ಗಾವಣೆಗೆ ಸಂಬಂಧ ಸೆರೆವಾಸ ಅನುಭವಿಸಿದರು. ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಬಹುಕೋಟಿ ಹಗರಣದಲ್ಲಿ ಭಾಗಿಯಾದ ಆರೋಪದಲ್ಲಿ ಆಡಳಿತಾರೂಢ ಕಾಂಗ್ರೆಸ್ ಸರ್ಕಾರದ ಸಚಿವ ನಾಗೇಂದ್ರರನ್ನು ಬಂಧಿಸಿ, ಜೈಲಿಗಟ್ಟಲಾಯಿತು. ಸಚಿವ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ ನಾಗೇಂದ್ರ, ಈಗ ಜಾಮೀನಿನ ಮೇಲೆ ಹೊರಬಂದಿದ್ದಾರೆ. ಧಾರವಾಡದ ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ, ಕೊಲೆ ಕೇಸಿನಲ್ಲಿ ಈಗಲೂ ಜೈಲಿನಲ್ಲಿಯೇ ಇದ್ದಾರೆ. ಇನ್ನು ಬೇಲೆಕೇರಿ ಬಂದರಿನಿಂದ ಅಕ್ರಮವಾಗಿ ಕಬ್ಬಿಣದ ಅದಿರು ರಫ್ತು ಮಾಡಿದ ಆರೋಪದ ಮೇಲೆ ಕಾರವಾರ-ಅಂಕೋಲದ ಕಾಂಗ್ರೆಸ್ ಶಾಸಕ ಸತೀಶ್ ಕೃಷ್ಣ ಸೈಲ್, ಜೈಲು ಪಾಲಾಗಿದ್ದವರು, ಈಗ ಜಾಮೀನಿನ ಮೇಲೆ ಹೊರಬಂದಿದ್ದಾರೆ. ಜೆಡಿಎಸ್‌ನ ಮಾಜಿ ಸಂಸದ ಪ್ರಜ್ವಲ್ ರೇವಣ್ಣ, ಅತ್ಯಾಚಾರದ ಆಪಾದನೆಯ ಮೇಲೆ ಜೀವಾವಧಿ ಶಿಕ್ಷೆಗೆ ಒಳಗಾಗಿದ್ದಾರೆ. ಬಿಜೆಪಿ ಶಾಸಕ ಬೈರತಿ ಬಸವರಾಜ್, ಕೊಲೆ ಕೇಸಿನಲ್ಲಿ ನಿರೀಕ್ಷಣಾ ಜಾಮೀನು ಪಡೆದಿದ್ದಾರೆ. ಇವರ ಸಾಲಿಗೆ ಈಗ ಚಿತ್ರದುರ್ಗ ಶಾಸಕ ರವೀಂದ್ರ, ಹೊಸ ಸೇರ್ಪಡೆಗೊಂಡಿದ್ದಾರೆ.

ಅಂದರೆ, ಪಕ್ಷಾತೀತವಾಗಿ ಚುನಾಯಿತ ಪ್ರತಿನಿಧಿಗಳು ಅತ್ಯಾಚಾರ, ಅಕ್ರಮ, ಕೊಲೆ, ಸುಲಿಗೆ, ದರೋಡೆಗಳಲ್ಲಿ ಭಾಗಿಯಾಗಿದ್ದಾರೆ. ಇವರನ್ನು ಶಾಸಕರನ್ನಾಗಿ ಆಯ್ಕೆ ಮಾಡಿಕೊಂಡ ಕ್ಷೇತ್ರದ ಜನ, ಇವರು ಅಕ್ರಮಗಳನ್ನು ಎಸಗಿ ಜೈಲು ಪಾಲಾದರೆ ಏನು ಮಾಡಬೇಕು? ಕ್ಷೇತ್ರದ ಸಮಸ್ಯೆಗಳು, ಅಭಿವೃದ್ಧಿಯ ಕತೆ ಏನು? ಅಥವಾ ಇದ್ದೂ ಇಲ್ಲದಂತಿರುವ ಜನಪ್ರತಿನಿಧಿಗಳನ್ನು ಕಂಡು, ಅವರು ಅಲ್ಲಿರುವುದೇ ವಾಸಿ ಎಂದುಕೊಂಡಿದ್ದಾರೆಯೇ?

ಯಾರಾದರೂ ಕ್ರೀಡೆಯಲ್ಲಿ ಗೆದ್ದು ಬಂದರೆ, ನಾಡಿಗೆ ಹೆಸರು ತರುವಂತಹ ಕೆಲಸ ಮಾಡಿದರೆ, ಸಮಾಜಕ್ಕೆ ಕೊಡುಗೆ ನೀಡಿದರೆ, ಉನ್ನತ ಮೌಲ್ಯಗಳ ಉದಾತ್ತತೆ ಮೆರೆದರೆ ಅವರಿಗೆ ಅದ್ದೂರಿ ಸ್ವಾಗತ, ಸನ್ಮಾನ ಸಿಗುವುದು ಸಾಮಾನ್ಯವಾಗಿತ್ತು. ಆದರೆ ಇತ್ತೀಚಿನ ದಿನಗಳಲ್ಲಿ, ನಾವು ಆಯ್ಕೆ ಮಾಡಿ ಕಳಿಸಿದ ಶಾಸಕರು, ಸಚಿವರು ಜೈಲಿಗೆ ಹೋಗಿ ಬರುವುದು; ಬಂದವರಿಗೆ ಸಂಭ್ರಮದ ಸ್ವಾಗತ ಸನ್ಮಾನ ಮಾಡುತ್ತಿರುವುದು ಸಾಮಾನ್ಯವಾಗಿದೆ. ತಪ್ಪು ಮಾಡುವುದು, ಮಾಡಿದ್ದನ್ನು ಸಮರ್ಥಿಸಿಕೊಳ್ಳುವುದು, ಮಾಡಿದ್ದಕ್ಕೆ ಸಂಭ್ರಮಿಸುವುದು ರಾಜಕೀಯ ನೈತಿಕತೆಯನ್ನು ಅಪವ್ಯಾಖ್ಯಾನಗೊಳಿಸುತ್ತಿದೆ. ರಾಜಕೀಯ ವ್ಯವಸ್ಥೆ ಸ್ವಚ್ಛಗೊಳ್ಳಬೇಕು ಎನ್ನುವುದು ಬರಹಕ್ಕೆ-ಭಾಷಣಕ್ಕಷ್ಟೇ ಸೀಮಿತವಾಗುತ್ತಿದೆ.

ಕಡಿದಾಳು ಮಂಜಪ್ಪ, ಶಾಂತವೇರಿ ಗೋಪಾಲಗೌಡ, ಕೆ.ಎಚ್. ರಂಗನಾಥ್, ಅಬ್ದುಲ್ ನಜೀರ್ ಸಾಬ್, ವೈ.ಕೆ. ರಾಮಯ್ಯ, ಎಚ್. ಏಕಾಂತಯ್ಯ, ಎಸ್.ಕೆ. ಕಾಂತ, ಎಚ್.ಜಿ. ಗೋವಿಂದೇಗೌಡರಂತಹ ಧೀಮಂತ ನಾಯಕರನ್ನು ಕಂಡ ಕರ್ನಾಟಕ, ಹೀಗೇಕಾಯಿತು? ಬದುಕಿನ ಭಾಗವಾದ ಪ್ರಜಾಪ್ರಭುತ್ವ, ಸಂವಿಧಾನ, ರಾಜಕಾರಣವನ್ನು ಅರ್ಥ ಮಾಡಿಕೊಳ್ಳದಿರುವುದರಿಂದ ಹೀಗಾಯಿತೇ?

ವಿಶ್ವ ವಿಕಲಚೇತನರ ದಿನಾಚರಣೆ

ರಾಯಚೂರು,ಜ.01-

ದಿನಾಂಕ 31.12.2025 ರಂದು ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ವಿಶ್ವ ವಿಕಲಚೇತನರ ದಿನಾಚರಣೆಯ ಕಾರ್ಯಕ್ರಮ ಜರಗಿತು.

ಈ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ್ ಭಜಂತ್ರಿ.ನವೀನ್ ಕುಮಾರ್ ಯು.ಉಪ ನಿರ್ದೇಶಕರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ರಾಯಚೂರು. ಶ್ರೀಮತಿ ಶ್ರೀದೇವಿ ಎಸ್.ಎನ್.ಜಿಲ್ಲಾ ಅಂಗವಿಕಲರ ಕಲ್ಯಾಣ ಅಧಿಕಾರಿಗಳು ಜಿಲ್ಲಾ ವಿಕಲಚೇತನರ ಇಲಾಖೆ ರಾಯಚೂರು. ಡಾ. ದಂಡಪ್ಪ ಬಿರಾದಾರ. ಜಿಲ್ಲಾ ಸಹ ಕಾರ್ಯದರ್ಶಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ರಾಯಚೂರು.ರಾಯಚೂರಿನ ಬಂಡಾರಿ ಆಸ್ಪತ್ರೆಯ ಆಡಳಿತ ಅಧಿಕಾರಿ.ಡಾ ರಿಯಾಜ್ ಹಾಗೂ ವಿವಿಧ ವಿಕಲಚೇತನರ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

ನಿತ್ಯ ಕನ್ನಡ ಬಳಕೆಯಿಂದಲೇ ಭಾಷೆ ಉಳಿಯಲು ಸಾಧ್ಯ : ನೀಲಕಂಠರಾವ ಮೂಲಗೆ



ಕಲಬುರಗಿ,ಜ.01

ಕನ್ನಡ ಭಾಷೆ, ಕಲೆ ಮತ್ತು ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ಹೊಣೆಗಾರಿಕೆ ನಮ್ಮೆಲ್ಲರ ಮೇಲಿದೆ. ದಿನನಿತ್ಯದ ಬದುಕಿನಲ್ಲಿ ಕನ್ನಡ ಭಾಷೆಯನ್ನು ಬಳಸಿದಾಗ ಮಾತ್ರ ಅದರ ನಿಜವಾದ ಬೆಳವಣಿಗೆ ಸಾಧ್ಯ ಎಂದು ಕಾಂಗ್ರೆಸ್ ಮುಖಂಡ ನೀಲಕಂಠರಾವ ಮೂಲಗೆ ಹೇಳಿದರು.

ನಗರದ ಅನ್ನಪೂರ್ಣ ಕ್ರಾಸ್ ಹತ್ತಿರದ ಕಲಾಮಂಡಳದಲ್ಲಿ ನಡೆದ ಹೊಸ ವರ್ಷದ ಕ್ಯಾಲೆಂಡರ್ ಬಿಡುಗಡೆ ಹಾಗೂ ಸಫಾಯಿ ಕರ್ಮಚಾರಿಗಳಿಗೆ ಬೆಡ್ ಶೀಟ್ ವಿತರಣಾ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ನಮ್ಮ ಬದುಕು ಕನ್ನಡ ಭಾಷೆಗೆ ಮೀಸಲಾಗ ಮಾತ್ರ ಕನ್ನಡ ಉಳಿಯುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.

ಸಂಘಗಳ ಒಕ್ಕೂಟದ ಅಧ್ಯಕ್ಷ ಮಂಜುನಾಥ ನಾಲವಾರ್ಕರ ಮಾತನಾಡಿ, ಸಫಾಯಿ ಕರ್ಮಚಾರಿಗಳ ದಿನನಿತ್ಯದ ಬದುಕು ಅತ್ಯಂತ ಕಷ್ಟಕರವಾಗಿದ್ದು, ಅವರಿಗೆ ಸಿಗಬೇಕಾದ ಸವಲತ್ತುಗಳು ದೊರೆತಾಗ ಮಾತ್ರ ಅವರ ಜೀವನ ಸಾರ್ಥಕವಾಗುತ್ತದೆ ಎಂದರು.

ನಿವೃತ್ತ ಶಿಕ್ಷಕ ಬಸವರಾಜ್ ಕಾಮರೆಡ್ಡಿ, ಶರಣಗೌಡ ಪಾಟೀಲ್ ಪಾಳಾ ಮಾತನಾಡಿದರು.

ಜೈ ಕನ್ನಡಿಗರ ಸೇನೆಯ ಅಧ್ಯಕ್ಷ ದತ್ತು ಭಾಸಗಿ ಅವರು ಕಾರ್ಯಕ್ರಮಕ್ಕೆ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಎಎಸ್‌ಐ ಪೋಲಿಸ್ ಅಧಿಕಾರಿ, ಡಾ.ಅಣ್ಣಪ್ಪ ಎಸ್.ಜಿ. ,ಗಣಜಲಖೇಡದ ನಾಗೇಶ್ ಮುತ್ಯಾ ಅವರು ಸಾನಿಧ್ಯ ವಹಿಸಿದ್ದರು.

ಈ ವೇಳೆ ಸಫಾಯಿ ಕರ್ಮಚಾರಿಗಳ ನಾಲ್ಕು ತಿಂಗಳಿಂದ ಬಾಕಿ ಇರುವ ಸಂಬಳವನ್ನು ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಶಾಸಕ ಅಲ್ಲಮಪ್ರಭು ಪಾಟೀಲ್ ಅವರ ಪುತ್ರ ಶರಣಗೌಡ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಹೊಸ ವರ್ಷದ ಕ್ಯಾಲೆಂಡರ್ ಬಿಡುಗಡೆ ಮಾಡಲಾಗಿದ್ದು, 200 ಕ್ಕೂ ಹೆಚ್ಚು ಸಫಾಯಿ ಕರ್ಮಚಾರಿಗಳಿಗೆ ಬೆಡ್ ಶೀಟ್ ಗಳನ್ನು ವಿತರಿಸಲಾಯಿತು. ಕಾರ್ಯಕ್ರಮವನ್ನು ಸಿದ್ದು ಹಂಚನಾಳ ಅವರು ನಿರೂಪಿಸಿದರು. ಸಂಜೀವಕುಮಾರ ಜಿ ಮಾಳಗಿ, ಮಲ್ಲು ಆಲಗೂಡ , ದಿಲೀಪ್ ಕುಮಾರ ಕೊಡ್ಲಿ, ಅಭಿಷೇಕ್ ಅಪ್ಪಾಜಿ ಕೊಟನೂರ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.



ಸುಪ್ತ ಪ್ರತಿಭೆಗಳನ್ನು ಹೊರ ಹಾಕುವುದು ಪ್ರತಿಭಾ ಕಾರಂಜಿ ಉದ್ದೇಶ : ಇಸಿಓ ರೇವಣ್ಣ

ಕಂಪ್ಲಿ,ಜ.01-

ಮಕ್ಕಳಲ್ಲಿ ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿನ ಸುಪ್ತ ಪ್ರತಿಭೆಗಳನ್ನು ಹೊರತರುವುದೇ ಪ್ರತಿಭಾ ಕಾರಂಜಿಯ ಮುಖ್ಯ ಉದ್ದೇಶವಾಗಿದೆ. ಸ್ಪರ್ಧೆಗಳ ನಿರ್ಣಾಯಕರು ಯಾವುದೇ ತಾರತಮ್ಯವಿಲ್ಲದೆ ಎಚ್ಚರಿಕೆಯಿಂದ ನೈಜ ಪ್ರತಿಭೆಯನ್ನು ಆಯ್ಕೆ ಮಾಡಬೇಕು ಎಂದು ಇಸಿಓ ರೇವಣ್ಣ ಹೇಳಿದರು.

ತಾಲೂಕಿನ ಮೆಟ್ರಿ ಗ್ರಾಮದ ಮಹಾದೇವ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಂಗಳವಾರ ಆಯೋಜಿಸಿದ್ದ ಮೆಟ್ರಿ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಕ್ಕಳು ಸೋಲು-ಗೆಲುವಿನ ಬಗ್ಗೆ ಯೋಚಿಸದೇ ಸ್ಪರ್ಧೆಗಳಲ್ಲಿ ಉತ್ಸಾಹದಿಂದ ಭಾಗವಹಿಸಬೇಕು. ಕೀಳರಿಮೆಯಿಂದ ಅನೇಕ ಮಕ್ಕಳು ತಮ್ಮ ಪ್ರತಿಭೆಯನ್ನು ವ್ಯಕ್ತಪಡಿಸಲಾಗದೇ ಎಲೆಮರೆಯ ಕಾಯಿಯಂತೆ ಉಳಿದು ಬಿಡುತ್ತಾರೆ. ಆದ್ದರಿಂದ ಇಂತಹ ಪ್ರತಿಭೆಗಳನ್ನು ಗುರುತಿಸಿ ಬೆಳೆಸುವುದು ಶಿಕ್ಷಕರ ಪ್ರಮುಖ ಕರ್ತವ್ಯವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಪ್ರಾಸ್ತಾವಿಕ ಭಾಷಣದಲ್ಲಿ ಸಿಆರ್‌ಪಿ ಭೂಮೇಶ್ವರ ಮಾತನಾಡಿದರು.

ನಂತರ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಹಾಗೂ ಕಲಾತ್ಮಕ ಸ್ಪರ್ಧೆಗಳು ನಡೆದವು. ಕಾರ್ಯಕ್ರಮದಲ್ಲಿ ವಿಜೇತರಾದ ಎಲ್ಲ ವಿದ್ಯಾರ್ಥಿಗಳಿಗೆ ಬಹುಮಾನಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಪ್ರಾಥಮಿಕ ಹಾಗೂ ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಹನುಮಂತಪ್ಪ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ದೊಡ್ಡಬಸಪ್ಪ, ನಿರ್ದೇಶಕ ಎಚ್.ಪಿ. ಸೋಮಶೇಖರ, ಜಿಪಿಟಿ ಸಂಘದ ಕಾರ್ಯದರ್ಶಿ ನಿಂಗರಾಜ, ಮುಖ್ಯಗುರುಗಳಾದ ಡಿ. ಜಗದೀಶ, ದೊಡಬಸವ, ವಿರೇಶಮ್ಮ, ಸುಮಿತ್ರ, ನಿರ್ಮಲ, ಮಾಲಿಕ್, ಮಲ್ಲಿಕಾರ್ಜುನ ಸೇರಿದಂತೆ ಸಹ ಶಿಕ್ಷಕರು ರಾಜನಾಯ್ಕ, ಉಷಾರಾಣಿ, ಧನಲಕ್ಷ್ಮಿ, ಸರ್ವಮಂಗಳ, ಮಡಿವಾಳ, ಪಂಪನಗೌಡ, ನಾಗರಾಜ ಸೇರಿದಂತೆ ಅನೇಕ ಶಿಕ್ಷಕರು, ಸ್ಥಳೀಯ ಮುಖಂಡರು ಹಾಗೂ 13 ಶಾಲೆಗಳ 200ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಹಿಂದೂ ಯುವಕನ ಸಜೀವ ದಹನ ಖಂಡಿಸಿ ಪ್ರತಿಭಟನೆ



ಭಾಲ್ಕಿ,ಜ.01-

ಭಾಲ್ಕಿ ಪಟ್ಟಣದಲ್ಲಿ ಬಾಂಗ್ಲಾದೇಶದಲ್ಲಿ ಅಮಾಯಕ ಹಿಂದೂ ಯುವಕನನ್ನು ಮರಕ್ಕೆ ಕಟ್ಟಿ ಸಜೀವವಾಗಿ ದಹಿಸಿರುವ ಘಟನೆಯನ್ನು ಖಂಡಿಸಿ ವಿಶ್ವ ಹಿಂದೂ ಪರಿಷತ್, ಬಜರಂಗ ದಳ ಭಾಲ್ಕಿ ಪ್ರಖಂಡದ ವತಿಯಿಂದ ಪ್ರತಿಭಟನೆ ನಡೆಸಲಾಯಿತು

ಭಾಲ್ಕಿ: ಬಾಂಗ್ಲಾದೇಶದಲ್ಲಿ ಹಿಂದೂ ಯುವಕನನ್ನು ಮರಕ್ಕೆ ಕಟ್ಟಿ ಸಜೀವ ದಹನ ಮಾಡಿರುವ ಘಟನೆ ಖಂಡಿಸಿ ಪಟ್ಟಣದಲ್ಲಿ ವಿಶ್ವ ಹಿಂದೂ ಪರಿಷತ್, ಬಜರಂಗ ದಳ ಭಾಲ್ಕಿ ಪ್ರಖಂಡದ ವತಿಯಿಂದ ಪ್ರತಿಭಟನೆ ನಡೆಸಲಾಯಿತು. ಅಂಬೇಡ್ಕರ್ ವೃತ್ತದಿಂದ ಮಹಾತ್ಮ ಗಾಂಧಿ ವೃತ್ತದವರೆಗೆ ಪ್ರತಿಭಟನೆ ನಡೆಸಲಾಯಿತು.

ಪ್ರಮುಖರು ಮಾತನಾಡಿ, ಬಾಂಗ್ಲಾದೇಶ ಸರ್ಕಾರವು ಹಿಂದೂಗಳ ರಕ್ಷಣೆಗಾಗಿ ತಕ್ಷಣ ಕಠಿಣ ಕ್ರಮ ಕೈಗೊಳ್ಳಬೇಕು. ಅಲ್ಪಸಂಖ್ಯಾತ ಹಿಂದೂಗಳ ರಕ್ಷಣೆಗೆ ಅಂತರರಾಷ್ಟ್ರೀಯ ಸಮುದಾಯ ಮಧ್ಯಸ್ಥಿಕೆ ವಹಿಸಬೇಕು' ಎಂದು ಆಗ್ರಹಿಸಿದರು.

ಪ್ರಮುಖರಾದ ಜೈಕಿಶನ್ ಬಿಯಾನಿ, ಅನುಸೂಜಾ ರೆಡ್ಡಿ, ದುರ್ಗಾ ವಾಹಿನಿ, ಶ್ರೀನಾಥ ಹೇಡಾ, ಸಚಿನ್ ಜಾಧವ, ಶೈಲೇಶ ಮಾಲಪಾನಿ, ರವಿಕಾಂತ ಕುಂಬಾರ, ದೇವರಾಜ ಸಿಂಗ್ ಠಾಕೂರ, ರಾಹುಲ್ ವಾಡೇಕರ, ಮೀನಾಕ್ಷಿ ಬಿರಾದಾರ, ಸುನೀತಾ ಮಿಣಕೆರೆ, ಶಿವು ಲೋಖಂಡೆ, ಡಿ.ಕೆ. ಸಿದ್ರಾಮ, ವೀರಣ್ಣ ಕಾರಬಾರಿ, ದಯಾನಂದ ಪವಾರ, ಸತೀಶ ಜಿ. ಮುದಾಲೆ, ಶಿವಾಜಿರಾವ ಮಾನೆ ಹಾಜರಿದ್ದರು.

ರಾಯಚೂರು ಕಾಂಗ್ರೆಸ್ ಅಲ್ಪಸಂಖ್ಯಾತ ಘಟಕದ ಜಿಲ್ಲಾ ಉಪಾಧ್ಯಕ್ಷರಾಗಿ ಡಾ|| ಮೊಹಮ್ಮದ್ ಸುಹೈಲ್ ನಾಯಕ್ ನೇಮಕ



ರಾಯಚೂರು,ಡಿ.31-

ರಾಯಚೂರಿನ ಯುವ ಹೋರಾಟಗಾರ ಡಾ|| ಮೊಹಮ್ಮದ್ ಸುಹೈಲ್ ನಾಯಕ್ ಅವರನ್ನು ಕಾಂಗ್ರೆಸ್ ಪಕ್ಷದ ಅಲ್ಪಸಂಖ್ಯಾತ ಘಟಕದ ರಾಯಚೂರು ಜಿಲ್ಲಾ ಉಪಾಧ್ಯಕ್ಷರನ್ನಾಗಿ ಹಾಗೂ ಜಿಲ್ಲಾ ಕಾರ್ಯದರ್ಶಿಯಾಗಿ ಮೆಹಬೂಬ್ ಅವರನ್ನು ನೇಮಕ ಮಾಡಿ ಜಿಲ್ಲಾ ಅಧ್ಯಕ್ಷರಾದ ಸೈಯದ್ ಫಯಾಜುದೀನ್ ಅವರು ಆದೇಶ ಹೊರಡಿಸಿದ್ದಾರೆ .

ರಾಯಚೂರು ನಗರ ವಿಧಾನ ಸಭಾ ಕ್ಷೇತ್ರದ ಪರಾಜಿತ ಅಭ್ಯರ್ಥಿ ಶ್ರೀ ಮೊಹಮ್ಮದ್ ಶಾಲಂ ಅವರು ಮತ್ತು ಕಾಂಗ್ರೆಸ್ ಅಲ್ಪಸಂಖ್ಯಾತ ಘಟಕದ ಜಿಲ್ಲಾ ಅಧ್ಯಕ್ಷರಾದ ಸೈಯದ್ ಫಯಾಜುದೀನ್ ಅವರು ಆದೇಶ ಪತ್ರವನ್ನು ನೀಡಿದರು

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಯೂಸುಫ್ ಖಾನ್, ನರಸಿಂಹಲು ಮಾಡಗಿರಿ, ಶೌಕತ್ ಹಮ್ರಾಜ್ ಮತ್ತು ಹಲವು ಕಾರ್ಯಕರ್ತರು ಉಪಸ್ಥಿತರಿದ್ದರು.

ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಹೊಸಪೇಟೆ ತಾಲೂಕು ಸಮಿತಿ ಪುನರ್ ರಚನೆ




ವಿಜಯನಗರ,ಜ.01-

ನಗರದ ಅಂಬೇಡ್ಕರ್ ಭವನದಲ್ಲಿ ಪ್ರೊ.ಬಿ.ಕೃಷ್ಣಪ್ಪ ಅವರು ಸ್ಥಾಪಿಸಿದ ಕರ್ನಾಟಕ ದಲಿತ ಸಂಘರ್ಷ ಸಮಿತಿ (ರಿ) 47/74-75 ಸಂಘಟನೆಯ ವತಿಯಿಂದ ಹೊಸಪೇಟೆ ತಾಲೂಕು ಪದಾಧಿಕಾರಿಗಳ ಸಮಿತಿಯನ್ನು ಪುನರ್ ರಚಿಸಲಾಯಿತು. ಈ ಸಂದರ್ಭದಲ್ಲಿ ವಿಜಯನಗರ ಜಿಲ್ಲಾ ಸಂಚಾಲಕರಾದ ಎಸ್. ದುರುಗೇಶ್, ಸಂಘಟನಾ ಸಂಚಾಲಕರಾದ ಹೆಚ್.ಬಿ. ಶ್ರೀನಿವಾಸ್ (ಮರಿಯಮ್ಮನಹಳ್ಳಿ), ಕಂದಗಲ್ ಪರಶುರಾಮ್, ತುಂಬಾರಗುದ್ದಿ ದುರುಗೇಶ್ ಹಾಗೂ ಹಿರಿಯ ದಲಿತ ನಾಯಕರಾದ ಗೋವಿಂದರಾಜ್, ಶಾಮ್ರಾಜ್, ಬಿ.ಎಡ್. ಹನುಮಂತಪ್ಪ, ಉದಯಕುಮಾರ ಅವರ ಉಪಸ್ಥಿತಿಯಲ್ಲಿ ತಾಲೂಕು ಸಮಿತಿಯನ್ನು ಪುನರ್ ರಚಿಸಲಾಯಿತು.

ಹೊಸಪೇಟೆ ತಾಲೂಕು ಸಂಚಾಲಕರಾಗಿ ಎಂ.ವಿರುಪಾಕ್ಷಿ, ಸಂಘಟನಾ ಸಂಚಾಲಕರಾಗಿ ಎಚ್. ಈರಣ್ಣ, ಗಾದಿಗನೂರು ನಾಗರಾಜ್, ಹಾರುವನಹಳ್ಳಿ ನಾಗರಾಜ್, ಪಕ್ಕೀರಪ್ಪ, ಹನುಮನಹಳ್ಳಿ ಮಂಜುನಾಥ, ಶ್ರೀನಿವಾಸ ನಂದಿಬಂಡೆ ಅವರನ್ನು ನೇಮಕ ಮಾಡಲಾಯಿತು. ಅಲ್ಲದೆ ದಲಿತ ವಿದ್ಯಾರ್ಥಿ ಒಕ್ಕೂಟದ ಸಂಚಾಲಕರಾಗಿ ಡಾ. ಆನಂದ್ ಹಾಗೂ ಸಂಘಟನಾ ಸಂಚಾಲಕರಾಗಿ ಎಚ್.ಕೆ. ಈಶ್ವರ್ ಅವರನ್ನು ನೇಮಿಸಲಾಯಿತು.

ನೂತನ ಪದಾಧಿಕಾರಿಗಳಿಗೆ ಆದೇಶ ಪತ್ರಗಳನ್ನು ವಿತರಿಸಿ ಶುಭ ಹಾರೈಸಿದ ನಾಯಕರು, ಸಂಘಟನೆಯನ್ನು ಇನ್ನಷ್ಟು ಬಲಪಡಿಸುವ ಜೊತೆಗೆ ಗ್ರಾಮ ಶಾಖೆಗಳನ್ನು ಪುನರ್ ರಚಿಸುವ ಮೂಲಕ ಹೊಸಪೇಟೆ ತಾಲೂಕಿನಲ್ಲಿ ಸಂಘಟನೆಯ ಕಾರ್ಯ ಚಟುವಟಿಕೆಗಳನ್ನು ಸಕ್ರಿಯಗೊಳಿಸಬೇಕೆಂದು ಕರೆ ನೀಡಿದರು.

ಜನವರಿಯಲ್ಲಿ ಚನ್ನಬಸವೇಶ್ವರ ಗುರುಕುಲದಲ್ಲಿ 5 ದಿನ ಗೋಲ್ಡನ್ ಸ್ಕಾಲರ್‌ಶಿಪ್ ಪ್ರವೇಶ ಪರೀಕ್ಷೆ : ಡಾ.ಬಸವಲಿಂಗ...



ಭಾಲ್ಕಿ,ಜ.01-

ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದಲ್ಲಿ ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ವತಿಯಿಂದ ಗೋಲ್ಡನ್ ಸ್ಕಾಲರ್‌ಶಿಪ್ ಪ್ರವೇಶ ಪರೀಕ್ಷೆ ಯೋಜನೆ ಮುಂದುವರಿಸಿದ್ದು, ಜನವರಿ ತಿಂಗಳಲ್ಲಿ ಐದು ದಿವಸ ಪ್ರವೇಶ ಪರೀಕ್ಷೆ ನಡೆಯಲಿವೆ ಎಂದು ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ನ ಅಧ್ಯಕ್ಷ, ನಾಡೋಜ ಡಾ. ಬಸವಲಿಂಗ ಪಟ್ಟದೇವರು ಹೇಳಿದರು. ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಮಂಗಳವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಶಿಕ್ಷಣ ಸಂಸ್ಥೆಯ 25ನೇ ವರ್ಷಾಚರಣೆ ಹಿನ್ನಲೆಯಲ್ಲಿ ಕಳೆದ 10 ವರ್ಷಗಳ ಹಿಂದೆ ಗುರುಕುಲ ಗೋಲ್ಡನ್ ಸ್ಕಾಲರ್‌ಶಿಪ್ ಯೋಜನೆ ಪರಿಚಯಿಸಲಾಗಿತ್ತು. ಈ ಯೋಜನೆಗೆ ಮಕ್ಕಳು, ಪಾಲಕರು ಹೆಚ್ಚಿನ ಆಸಕ್ತಿ ತೋರುತ್ತಿರುವುದರಿಂದ ಗೋಲ್ಡನ್ ಸ್ಕಾಲರ್‌ಶಿಪ್ ಯೋಜನೆ ಹಾಗೆಯೇ ಮುಂದುವರಿಸಲು ನಿರ್ಣಯ ಕೈಗೊಳ್ಳಲಾಗಿದೆ ಎಂದರು.

ಈ ಯೋಜನೆ ಬಡವರು, ರೈತರು, ಕೂಲಿ ಕಾರ್ಮಿಕರ ಮಕ್ಕಳಿಗೆ ವರದಾನವಾಗಿದೆ. ಪ್ರತಿ ವರ್ಷ ನೂರು ಮಕ್ಕಳು ಉಚಿತ ಶಿಕ್ಷಣದ ಸೌಲಭ್ಯ ಪಡೆದು ನೀಟ್ ಹಾಗೂ ಐಐಟಿಯಲ್ಲಿ ಉತ್ತಮ ಸಾಧನೆ ತೋರುತ್ತಿದ್ದಾರೆ ಎಂದು ಹರ್ಷ ವ್ಯಕ್ತಪಡಿಸಿದರು.

ಪೀಠಾಧಿಪತಿ ಗುರುಬಸವ ಪಟ್ಟದೇವರು ಮಾತನಾಡಿ, ಗಡಿಭಾಗದ ಬಡ ಪ್ರತಿಭಾವಂತ ಮಕ್ಕಳ ಶೈಕ್ಷಣಿಕ ಪ್ರಗತಿಗಾಗಿ ನಾಡೋಜ ಡಾ.ಬಸವಲಿಂಗ ಪಟ್ಟದೇವರ ಮಾರ್ಗದರ್ಶನದಲ್ಲಿ ಗುರುಕುಲ ಸ್ಕಾಲರ್‌ಶಿಪ್ ಯೋಜನೆ ಜಾರಿಗೆ ತಂದಿದ್ದೇವೆ. ಈ ಬಾರಿಯು ಚನ್ನಬಸವೇಶ್ವರ ಗುರುಕುಲದಲ್ಲಿ 2026-27ನೇ ಸಾಲಿನ ಪ್ರವೇಶಕ್ಕಾಗಿ ಜ.4, 10, 11, 18 ಮತ್ತು 25ರಂದು ಪ್ರವೇಶ ಪರೀಕ್ಷೆ ಏರ್ಪಡಿಸಿದ್ದೇವೆ.

ಸುದ್ದಿಗೋಷ್ಠಿಯಲ್ಲಿ ಮಹಾಲಿಂಗ ಸ್ವಾಮೀಜಿ, ಪ್ರಾಚಾರ್ಯ ಬಸವರಾಜ್ ಮೊಳಕೀರೆ, ಆಡಳಿತಾಧಿಕಾರಿ ಮೋಹನ್ ರೆಡ್ಡಿ ಉಪಸ್ಥಿತರಿದ್ದರು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR